MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 267 | ಶುಕ್ರವಾರ : 08-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 267 | FRIDAY : 08-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಕೆಪಿಎಂಇ, ಪಿಸಿಪಿಎನ್‌ಡಿಟಿ ಕಾಯ್ದೆಗಳ ಮಾರ್ಗಸೂಚಿ ಪಾಲನೆಯಾಗಲಿ: ನಿತೀಶ್ ಕೆ.




ಯುವ ಮಾರ್ಗ ಸುದ್ದಿ

**ರಾಯಚೂರು,ಆ.7–** ಜಿಲ್ಲೆಯಲ್ಲಿ ಎಲ್ಲಾ ಆಸ್ಪತ್ರೆ ಮತ್ತು ಕ್ಲಿನಿಕ್‌ಗಳು ಕೆಪಿಎಂಇ ಕಾಯ್ದೆಯಡಿ ನಿಯಮಗಳನ್ನು ಕಡ್ಡಾಯ ಪಾಲನೆ ಮಾಡಬೇಕು. ಕೆಪಿಎಂಇ ಕಾಯ್ದೆ ಬಗ್ಗೆ ಸರಿಯಾದ ಮಾಹಿತಿ ತಿಳಿದುಕೊಂಡು ಮಾರ್ಗ ಸೂಚಿಗಳನ್ನು ಪಾಲಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಹೇಳಿದರು.

ಆಗಸ್ಟ್ 7ರಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಭಾರತೀಯ ವೈದ್ಯಕೀಯ ಸಂಘದ ವತಿಯಿಂದ ಕೆಪಿಎಂಇ ಮತ್ತು ಪಿಸಿ&ಪಿಎನ್ ಡಿಟಿ ಕಾಯ್ದೆಯ ಕುರಿತು ಒಂದು ದಿನದ ಕಾರ್ಯ ಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆಸ್ಪತ್ರೆಗಳು ಸ್ವಚ್ಚವಾಗಿ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು ಸೇರಿದಂತೆ ಇತರೆ ಸೌಕರ್ಯ ಹೊಂದಿರಬೇಕು. ಕೆಲವು ಕ್ಲಿನಿಕ್‌ಗಳು ಮತ್ತು ಆಸ್ಪತ್ರೆಗಳು ಕೆಪಿಎಂಇ ಕಾಯ್ದೆ ಬಗ್ಗೆ ಗೊತ್ತಿದ್ದರು ಸಹ ಮಾರ್ಗ ಸೂಚಿಗಳನ್ನು ಪಾಲನೆ ಮಾಡುವುದಿಲ್ಲ. ಇದರಿಂದಾಗಿ ದೂರುಗಳು ಬಂದ ಹಿನ್ನೆಲೆಯಲ್ಲಿ ಬೆಂಗಳೂರಿನಿಂದ ತಂಡವೊಂದು ಬಂದು ಪರಿಶೀಲನೆ ನಡೆಸಿ ದಂಡ ವಿಧಿಸಿದೆ ಎಂದರು.

ಕೆಪಿಎಂಇ ಕಾಯ್ದೆ ಸರಿಯಾಗಿ ಪಾಲನೆ ಮಾಡಬೇಕು ಎಂದು ತಿಳಿಸುವುದು ಈ ಕಾರ್ಯಾಗಾರದ ಉದ್ದೇಶವಾಗಿದೆ. ಗ್ರಾಮೀಣ ಭಾಗದಲ್ಲಿ ಆರ್‌ಎಂಪಿ ವೈದ್ಯರು ಕ್ಲಿನಿಕ್ ಇಟ್ಟುಕೊಂಡು ಜನರಿಗೆ ಹೆಚ್ಚಿನ ಪ್ರಮಾಣದಲ್ಲಿ ಡೋಸ್ ನೀಡುತ್ತಾರೆ. ಕಾಯ್ದೆಯ ಬಗ್ಗೆ ಸರಿಯಾಗಿ ತಿಳಿದುಕೊಳ್ಳುತ್ತಿಲ್ಲ.(2ನೇಪುಟಕ್ಕೆ)

## ಅರಕೇರಾ ತಾಲೂಕಿಗೆ ಗ್ರಾಮಗಳ ಸೇರ್ಪಡೆ ವಿರೋಧ: ದೇವದುರ್ಗ ಶಾಸಕರಿಗೆ ಮನವಿ



ಯುವ ಮಾರ್ಗ ಸುದ್ದಿ

**ದೇವದುರ್ಗ,ಆ.07–** ನೂತನವಾಗಿ ರಚನೆಯಾಗಿರುವ ಅರಕೇರಾ ತಾಲೂಕಿಗೆ ದೇವದುರ್ಗ ತಾಲೂಕಿನ ಕೆಲ ಗ್ರಾಮ ಪಂಚಾಯಿತಿಗಳನ್ನು ಸೇರ್ಪಡೆ ಮಾಡಿರುವ ಸರ್ಕಾರದ ನಿರ್ಧಾರವನ್ನು ವಿರೋಧಿಸಿ, ದೇವದುರ್ಗ ಉಳಿವಿಗಾಗಿ ಹೋರಾಟ ಸಮಿತಿ ಇಂದು ದೇವದುರ್ಗ ಶಾಸಕರಾದ ಕರೆಮ್ಮ ಜಿ. ನಾಯಕ ಅವರಿಗೆ ಮನವಿ ಸಲ್ಲಿಸಿತು.

ಈ ನಿರ್ಧಾರದಿಂದಾಗಿ ದೇವದುರ್ಗ ತಾಲೂಕಿನ ಅಸ್ತಿತ್ವಕ್ಕೆ ಧಕ್ಕೆ ಉಂಟಾಗಲಿದೆ. ಆದ್ದರಿಂದ ಈ ಗ್ರಾಮ ಪಂಚಾಯಿತಿಗಳನ್ನು ಪುನಃ ದೇವದುರ್ಗ ತಾಲೂಕಿನಲ್ಲಿ ಮುಂದುವರಿಸಬೇಕು ಎಂದು ಸಮಿತಿಯ ಸದಸ್ಯರು ಶಾಸಕರಿಗೆ ಒತ್ತಾಯಿಸಿದರು. ಮುಂಬರುವ ಆಗಸ್ಟ್ ತಿಂಗಳಿನಲ್ಲಿ ನಡೆಯಲಿರುವ ವಿಧಾನಸಭಾ ಅಧಿವೇಶನದಲ್ಲಿ ಈ ವಿಷಯದ ಬಗ್ಗೆ ಧ್ವನಿ ಎತ್ತಿ, ದೇವದುರ್ಗ ಅಖಂಡ ತಾಲೂಕಾಗಿ ಉಳಿಯುವಂತೆ ಕ್ರಮ ಕೈಗೊಳ್ಳಬೇಕೆಂದು ಸಮಿತಿಯವರು ಶಾಸಕರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಮಿತಿಯ ಗೌರವ ಅಧ್ಯಕ್ಷರಾದ ಅಮರೇಶಪ್ಪ ಗೌಡ ಪೊಲೀಸ್ ಪಾಟೀಲ್, ಅಧ್ಯಕ್ಷರಾದ ಗೋವಿಂದರಾಜ ನಾಯಕ್ ಕೊತ್ತದೊಡ್ಡಿ, ಕಾರ್ಯಾಧ್ಯಕ್ಷರಾದ ಸಿದ್ದನಗೌಡ ಪಾಟೀಲ್ ಮೂಡಲಗುಂಡ, ಪ್ರಧಾನ ಕಾರ್ಯದರ್ಶಿ ಶರಣಗೌಡ ಸುಂಕೇಶ್ವರಹಾಳ, ಉಪಾಧ್ಯಕ್ಷರಾದ ಚನ್ನಪ್ಪ ಮಸಿದಾಪೂರ್ ಮತ್ತು ಸಿದ್ದಣ್ಣ ಬಿ. ಗಣೇಕಲ್, ಕಾನೂನು ಸಲಹೆಗಾರರಾದ ಬಸವನಗೌಡ ದೇಸಾಯಿ, ಹನುಮಂತರಾಯ ಚಿಂತಲ ಕುಂಟ, ವಸಂತ್ ಕುಮಾರ ಸೋಮಮನ ಮರಡಿ ಸೇರಿದಂತೆ ಹಲವು ಸದಸ್ಯರು ಉಪಸ್ಥಿತರಿದ್ದರು.

## ಕಾಟನ್ ಜಿನ್ನಿಂಗ್ ಘಟಕಗಳಿಗೆ ಮಂಜೂರಾದ ಹಣ ಶೀಘ್ರ ಬಿಡುಗಡೆಗೆ ಚರ್ಚೆ



ಯುವ ಮಾರ್ಗ ಸುದ್ದಿ

**ಬೆಂಗಳೂರು,ಆ.07–**ರಾಯಚೂರು ಜಿಲ್ಲೆಯಲ್ಲಿರುವ ಕಾಟನ್ ಜಿನ್ನಿಂಗ್ ಅಂಡ್ ಪ್ರೆಸ್ಸಿಂಗ್ ಘಟಕಗಳಿಗೆ ಮಂಜೂರಾಗಿರುವ ಸಹಾಯಧನವನ್ನು ಶೀಘ್ರ ಬಿಡುಗಡೆಗೊಳಿಸುವ ಕುರಿತು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್ ಎಸ್ ಬೋಸರಾಜು ಅವರು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರಾದ ಶರಣಬಸಪ್ಪ ದರ್ಶನಪುರ್ ಅವರನ್ನು ರಾಯಚೂರು ಕಾಟನ್ ಮಿಲ್ಲರ್ಸ್ ಅಸೋಸಿಯೇಷನ್ ಸದಸ್ಯರೊಂದಿಗೆ ಭೇಟಿ ಮಾಡಿ ಚರ್ಚಿಸಿದರು.

ವಿಕಾಸ ಸೌಧದಲ್ಲಿರುವ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರ ಕಾರ್ಯಾಲಯದಲ್ಲಿ ಸಭೆ ನಡೆಸಿದರು.

ರಾಯಚೂರು ಜಿಲ್ಲೆಯ ಒಟ್ಟು 11 ಕಾಟನ್ ಜಿನ್ನಿಂಗ್ ಅಂಡರ್ ಪ್ರಸಿಂಗ್ ಘಟಕಗಳಿಗೆ 2021– 22 ರಲ್ಲಿ ಸಹಾಯ ಧನವನ್ನು ಮಂಜೂರು ಮಾಡಲಾಗಿದೆ. ಆದರೆ ಇಲ್ಲಿಯವರೆಗೆ ಹಣ ಬಿಡುಗಡೆಯಾಗಿರುವುದಿಲ್ಲ 2020– 25ರ ಕೈಗಾರಿಕಾ ನೀತಿಯ ಅನುಸಾರ ಶೀಘ್ರ ಹಣವನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಬೇಕೆಂದು ಸಚಿವರಿಗೆ ತಿಳಿಸಿದರು.

ಕಾಟನ್ ಜಿನ್ನಿಂಗ್ ಅಂಡ್ ಪ್ರೆಸ್ಸಿಂಗ್ ಘಟಕಗಳ ಎದುರಿಸುತ್ತರುವ ಸಮಸ್ಯೆಗಳ ಕುರಿತು ಕೈಗಾರಿಕೆ ಸಚಿವರಿಗೆ ವಿವರಿಸಿದರು.

ಈ ಸಂದರ್ಭದಲ್ಲಿ ರಾಯಚೂರು ಕಾಟನ್ ಮಿಲ್ಲರ್ ಅಸೋಸಿಯೇಷನ್ ಅಧ್ಯಕ್ಷರಾದ ಲಕ್ಷ್ಮಿ ರೆಡ್ಡಿ, ಶೈಲೇಶ್ ಕುಮಾರ್, ಆನಂದ್ ರೆಡ್ಡಿ, ರಮೇಶ್ ಲಾಲ್, ಪ್ರತಾಪ್ ರೆಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕರ್ನಾಟಕ ರೋಹಿತ್ ವೇಮುಲ ಮಸೂದೆ – 2025 ತಿರಸ್ಕರಿಸುವಂತೆ ರಾಜ್ಯಪಾಲರಿಗೆ ಮನವಿ



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.07–** ರಾಜ್ಯ ಸರ್ಕಾರದ ಪ್ರಸ್ತಾವಿತ ಕರ್ನಾಟಕ ರೋಹಿತ್ ವೇಮುಲ ಮಸೂದೆ –2025 ಅನ್ನು ತಿರಸ್ಕರಿಸುವಂತೆ ಹಿಂದೂ ಜನಜಾಗೃತಿ ತಾಲೂಕು ಸಮಿತಿ ವತಿಯಿಂದ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಅವರ ಮೂಲಕ ರಾಜ್ಯಪಾಲರಿಗೆ ಈ ಮನವಿ ಸಲ್ಲಿಸಲಾಯಿತು.

ತಾಲೂಕು ಹಿಂದೂ ಜನಜಾಗೃತಿ ಶಾಖಾ ಸಮನ್ವಯಕರಾದ ದುರ್ಗಪ್ಪ ಮಾತನಾಡಿ, ಈ ಮಸೂದೆಯು ತಾರತಮ್ಯ ಮತ್ತು ಅಸಾಂವಿಧಾನಿಕವಾಗಿದ್ದು, ರಾಜಕೀಯ ಪ್ರೇರಿತವಾಗಿದೆ. ಇದು ಕ್ಯಾಂಪಸ್ ಗಳಲ್ಲಿ ವಿಭಜನೆ ಮತ್ತು ಭಯದ ವಾತಾವರಣವನ್ನು ಸೃಷ್ಟಿಸುತ್ತದೆ. ಅಲ್ಲದೆ, ಡಾ. ಬಿ.ಆರ್. ಅಂಬೇಡ್ಕರ್ ಅವರ ಜಾತಿರಹಿತ ಮತ್ತು ಅರ್ಹತೆ ಆಧಾರಿತ ಭಾರತದ ದೃಷ್ಟಿಕೋನಕ್ಕೆ ವಿರುದ್ಧವಾಗಿದೆ ಎಂದು ಅವರು ಆರೋಪಿಸಿದರು.

ಈ ವಿಷಯದಲ್ಲಿ ರಾಜ್ಯಪಾಲರು ಮಧ್ಯಪ್ರವೇಶಿಸಬೇಕು. ಪ್ರಸ್ತಾವಿತ ಮಸೂದೆಯನ್ನು ತಿರಸ್ಕರಿಸಿ, ಅದನ್ನು ಹಿಂಪಡೆಯಲು ಅಥವಾ ಮರು ಕರಡು ತಯಾರಿಸಲು ರಾಜ್ಯ ಸರ್ಕಾರಕ್ಕೆ ಸಲಹೆ ನೀಡಬೇಕು ಎಂದು ಸಮಿತಿ ಒತ್ತಾಯಿಸಿದೆ.

ಮಸೂದೆಯ ಅಗತ್ಯತೆ, ಮಾನ್ಯತೆ ಮತ್ತು ಸಾಂವಿಧಾನಿಕ ಸಿಂಧುತ್ವವನ್ನು ನಿರ್ಣಯಿಸಲು ಕಾನೂನು ತಜ್ಞರು, ಶೈಕ್ಷಣಿಕ ವೃತ್ತಿಪರರು, ವಿದ್ಯಾರ್ಥಿ ಪ್ರತಿನಿಧಿಗಳು ಹಾಗೂ ನಾಗರಿಕ ಸಮಾಜದ ಸದಸ್ಯರನ್ನು ಒಳಗೊಂಡ ಸ್ವತಂತ್ರ ಪರಿಶೀಲನಾ ಸಮಿತಿಯನ್ನು ರಚಿಸಬೇಕು ಎಂದು ದುರ್ಗಪ್ಪ ಆಗ್ರಹಿಸಿದರು.

ಈ ಸಂದರ್ಭದಲ್ಲಿ ದೊಡ್ಡಪ್ಪ ಹೂಗಾರ, ಸುರೇಶ, ಜಯಸಿಮಗ್ ರಾಜ ಪುರೋಹಿತ್, ವರಪ್ರಸಾದ, ಆನಂದ, ರಾಜೇಶ, ಬಸವನಗೌಡ.ಡಿ, ಮಾರುತಿ ನಾಯಕ, ಸುರೇಶ ಮುಂದಿನ ಮನೆ, ರಾಘವೇಂದ್ರ, ಮಧುಕರ್, ರಾಜೇಶ, ಹಂಪಯ್ಯ, ಸೋಮಶೇಖರ, ಮಂಜು ನಾಥ, ನವೀನ್ ಗೌಡ, ರಾಜಶೇಖರ, ಗಂಗಾಧರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಹಾಲು ಕಲಬೆರಕೆ ತಡೆಗೆ ಆಹಾರ ಸುರಕ್ಷತಾ ಇಲಾಖೆಯಿಂದ ಮಾದರಿ ಸಂಗ್ರಹ

ಯುವ ಮಾರ್ಗ ಸುದ್ದಿ

**ಮಾನ್ವಿ,ಆ.07–** ಆಹಾರ ಸುರಕ್ಷತಾ ಇಲಾಖೆಯ ಆಯುಕ್ತರ ನಿರ್ದೇಶನದ ಮೇರೆಗೆ, ತಾಲ್ಲೂಕಿನಲ್ಲಿರುವ ಹಾಲು ಸಂಗ್ರಹಣಾ ಕೇಂದ್ರಗಳು ಮತ್ತು ಖಾಸಗಿ ಡೈರಿಗಳಿಂದ ಹಾಲಿನ ಮಾದರಿಗಳನ್ನು ಸಂಗ್ರಹಿಸುವ ಅಭಿಯಾನವನ್ನು ನಡೆಸಲಾಗಿದೆ. ಆಹಾರ ಸುರಕ್ಷತಾ ಅಧಿಕಾರಿ ಬನದೇಶ್ವರ ವೈ. ಅವರು ಈ ಕಾರ್ಯವನ್ನು ನಿರ್ವಹಿಸಿದರು.



ಆಗಸ್ಟ್ 1 ರಿಂದ ಪ್ರಾರಂಭವಾದ ಈ ಅಭಿಯಾನದ ಅಡಿಯಲ್ಲಿ, ಕೆ.ಎಂ.ಎಫ್. ಮತ್ತು ಖಾಸಗಿ ಡೈರಿಗಳಿಂದ ಒಟ್ಟು 9 ಹಾಲಿನ ಮಾದರಿಗಳನ್ನು ಸಂಗ್ರಹಿಸಲಾಗಿದೆ. ಅಮರೇಶ್ವರ ಕ್ಯಾಂಪ್ ಹಾಲು ಉತ್ಪಾದಕರ ಸಂಘ, ಜಾಲಪುರ ಗ್ರಾಮದ ಹಾಲು ಉತ್ಪಾದಕರ ಸಂಘ, ಮಾನ್ವಿ ಪಟ್ಟಣದ ದೀಪಕ್ ಮಿಲ್ಕ್ ಡೈರಿ, ಮತ್ತು ಆಂಜನೇಯ ಮಿಲ್ಕ್ ಡೈರಿ ಸೇರಿದಂತೆ ವಿವಿಧ ಸ್ಥಳಗಳಿಂದ ಈ ಮಾದರಿಗಳನ್ನು ಪಡೆಯಲಾಗಿದೆ.

ಈ ಮಾದರಿಗಳನ್ನು ಹೆಚ್ಚಿನ ಪರೀಕ್ಷೆಗಾಗಿ ಮೈಸೂರಿನ ಆಹಾರ ಸುರಕ್ಷತಾ ಇಲಾಖೆಯ ಪ್ರಯೋಗಾಲಯ ಮತ್ತು ಕೆ.ಎಂ.ಎಫ್. ಪ್ರಯೋಗಾಲಯಗಳಿಗೆ ಕಳುಹಿಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹಾಲಿನಲ್ಲಿ ನೀರು, ಯೂರಿಯಾ, ಡಿಟರ್ಜೆಂಟ್, ಮತ್ತು ಸ್ಟಾರ್ಚ್‌ನಂತಹ ಕಲಬೆರಕೆಗಳು ಪತ್ತೆಯಾಗಿರುವ ಪ್ರಕರಣಗಳು ಈ ಹಿಂದೆ ವರದಿಯಾಗಿವೆ. ಇಂತಹ ಕಲಬೆರಕೆ ಹಾಲು ಸೇವನೆಯಿಂದ ಮಕ್ಕಳೂ ಸೇರಿದಂತೆ ಎಲ್ಲರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಬಹುದು.

ಈ ಬಗ್ಗೆ ಮಾತನಾಡಿದ ಬನದೇಶ್ವರ ವೈ., ರಾಜ್ಯದಾದ್ಯಂತ ಹಾಲು ಗುಣಮಟ್ಟ ಪರೀಕ್ಷಾ ಅಭಿಯಾನವನ್ನು ಹಮ್ಮಿ ಕೊಳ್ಳಲಾಗಿದ್ದು, ಅದರ ಭಾಗವಾಗಿ ಮಾನ್ವಿ ಮತ್ತು ಸಿಂಧನೂರು ತಾಲೂಕುಗಳಲ್ಲಿ ಮಾ ದರಿಗಳನ್ನು ಸಂಗ್ರಹಿಸಲಾಗಿದೆ. ಪ್ರಯೋ ಗಾಲಯದ ವರದಿ ಆಧಾರದ ಮೇಲೆ, ಕಲಬೆರಕೆ ಸಾಬೀತಾದರೆ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊ ಳ್ಳಲಾಗುವುದು ಎಂದು ಅವರು ಎಚ್ಚರಿ ಸಿದ್ದಾರೆ.

## ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟ : ಲೈಸನ್ಸ್ ರದ್ದುಪಡಿಸಿ ಕಪ್ಪುಪಟ್ಟಿಗೆ ಸೇರಿಸಲು ದಸಂಸ ಒತ್ತಾಯ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.07–**ತಾಲೂಕಿನ ಕಾಳಾಪೂರ ಗ್ರಾಮ ಪಂಚಾಯತ್ ವ್ಯಾ ಪ್ತಿಯ ಐದನಾಳ ಗ್ರಾಮದ ನ್ಯಾಯಬೆಲೆ ಅಂಗಡಿ ಮಾಲೀಕರು ಪಡಿತರ ಅಕ್ಕಿಯನ್ನು ಚೀಟಿದಾರರಿಗೆ ಹಂಚಿಕೆ ಮಾಡದೇ ಕಾಳಸಂತೆಯಲ್ಲಿ ಮಾರಾಟ ಮಾಡಿಕೊಳ್ಳುತ್ತಿದ್ದು, ಕೂಡಲೇ ಇವರ ಲೈಸನ್ಸ್ ರದ್ದುಪಡಿಸಿ, ಕಪ್ಪುಪಟ್ಟಿಗೆ ಸೇರಿಸಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಯಂಕಪ್ಪ ಚಿತಾಪೂರ ಒತ್ತಾಯಿಸಿದರು.




ಪಟ್ಟಣದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿದ ಅವರು, ಐದನಾಳ ಗ್ರಾಮದ ನ್ಯಾಯಬೆಲೆ ಅಂಗಡಿ ಸಂಖ್ಯೆ 56 ಮಾಲೀಕ ಅಮರೇಗೌಡ ಅವರು ನ್ಯಾಯಬೆಲೆ ಅಂಗಡಿಗೆ ಬರುವ ಆಹಾರ ಸಾಮಗ್ರಿಗಳನ್ನು ಸಮರ್ಪಕವಾಗಿ ಹಂಚಿಕೆ ಮಾಡದೇ, ರಾಜಾರೋಷವಾಗಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಾರೆ. ಜುಲೈ 2025ರ ಆಹಾರ ದಾಸ್ತಾನು ಮಾರಾಟ ಮಾಡಲು ಹೋಗಿದ್ದನ್ನು ಖುದ್ದು ಅಧಿಕಾರಿಗಳೇ ನೋಡಿ ಬೈಯ ಪರಿಣಾಮ ವಾಪಸ್ ತಂದಿದ್ದಾರೆ. ಅಲ್ಲದೇ, ಫಲಾನುಭವಿಗಳಿಗೆ ಕೊಡುವ ಅಕ್ಕಿಯಲ್ಲಿ ಎರಡು ಕೆ.ಜಿ. ಕಡಿಮೆ ಕೊಡುತ್ತಾರೆ. ಈ ಬಗ್ಗೆ ಈಗಾಗಲೇ ಅಧಿಕಾರಿಗಳು ಎಚ್ಚರಿಕೆ ನೀಡಿದ್ದರೂ. ತಿದ್ದಿಕೊಳ್ಳದ ಇವರು ತನ್ನ ಚಾಳಿಯನ್ನೇ ಮುಂದುವರೆಸಿದ್ದಾರೆ. ಕೂಡಲೇ ಪರಿಶೀಲನೆ ಮಾಡಿ ಇವರ ಅಂಗಡಿ ಲೈಸನ್ಸ್ ರದ್ದುಮಾಡಬೇಕು ಎಂದು ತಹಸಿಲ್ದಾರ್‌ಗೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸಂಘಟನೆ ಮುಖಂಡರಾದ ಬಸವರಾಜ ಕುಣಿಕೆಲ್ಲೂರು, ನಾಗರಾಜ ಹಾಲಭಾವಿ, ಹನುಮಂತಪ್ಪ ಗುಳೇದಗುಡ್ಡ, ಶರಣಗೌಡ ಸೇರಿ ಇತರರಿದ್ದರು.

## ವಿವಿಧ ಬೇಡಿಕೆಗೆ ಆಗ್ರಹಿಸಿ ಮುಖ್ಯಮಂತ್ರಿಗೆ ಕರವೇ ಮನವಿ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.07–**ತಾಲೂಕಿನಲ್ಲಿ ವಿವಿಧ ಬೇಡಿಕೆಗಳು ಈಡೇರಿದೆ ಸಮಸ್ಯೆಗಳು ಹಾಗೇ ಉಳಿದು ತಾಲೂಕಿನ ಜನರು ಕಷ್ಟಗಳನ್ನು ಅನುಭವಿಸುತ್ತಿದ್ದಾರೆ ಎಂದು ಕರವೇ (ಪ್ರವೀಣ್ ಶೆಟ್ಟಿ ಬಣದ) ತಾಲ್ಲೂಕು ಅಧ್ಯಕ್ಷ ಆಂಜನೇಯ ಭಂಡಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೋರಿಯರ್ ಮುಖಾಂತರ ಮನವಿ ಸಲ್ಲಿಸಿದ್ದಾರೆ.



ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗಾಗಿ ಕಳೆದ 4 ವರ್ಷಗಳಿಂದ ನಿರಂತರವಾಗಿ ಹೋರಾಟ ಮಾಡಲಾಗುತ್ತಿದೆ. ಕೂಡಲೇ ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ ಮಾಡಬೇಕು.ಬ್ರಿಟಿಷರ ಕಾಲದಲ್ಲಿ ಜಿಲ್ಲಾ ಕೇಂದ್ರವಾಗಿದ್ದ ಲಿಂಗಸುಗೂರು ಉಪ ವಿಭಾಗವನ್ನು ಜಿಲ್ಲೆಯನ್ನಾಗಿ ಘೋಷಣೆ ಮಾಡಬೇಕು. ಲಿಂಗಸುಗೂರು ತಾಲೂಕಿಗೆ ಮಂಜೂರಾಗಿದ್ದ 200 ಹಾಸಿಗೆ ಜಿಲ್ಲಾಸ್ಪತ್ರೆಯನ್ನು ಸಿಂಧನೂರಿಗೆ ಸ್ಥಳಾಂತರ ಮಾಡಲಾಗಿದ್ದು, ಕೂಡಲೇ 200 ಹಾಸಿಗೆ ಜಿಲ್ಲಾ ಸ್ಪತ್ರೆಯನ್ನು ಲಿಂಗಸುಗೂರಿಗೆ ಸ್ಥಳಾಂತರಿಸಬೇಕು. ಲಿಂಗಸುಗೂರಿಗೆ ಪೂರ್ಣ ಪ್ರಮಾಣದ ಜಿಲ್ಲಾ ಸತ್ರನ್ಯಾಯಲವನ್ನು ಮಂಜೂರು ಮಾಡಬೇಕು.ಶೀಲಹಳ್ಳಿ ಸೇತುವೆಗೆ ಅನುದಾನ ಮಂಜೂರು ಮಾಡಲಾಗಿದ್ದು, ತಾಂತ್ರಿಕ ಕಾರಣಗಳಿಂದ ಕಾಮಗಾರಿ ವಿಳಂಭವಾಗಿದ್ದು, ಕೂಡಲೇ ಶೀಲಹಳ್ಳಿ ಸೇತುವೆ ಕಾಮಗಾರಿ ಆರಂಭಿಸಬೇಕು. ಲಿಂಗಸುಗೂರಿನಲ್ಲಿ ಮಿನಿ ವಿಧಾನಸೌಧವು ಊರ ಹೊರಗಡೆ ಇದ್ದು, ಗ್ರಾಮೀಣ ಪ್ರದೇಶದ ಜನರು ತುಂಬ ತೊಂದರೆ ಅನುಭವಿಸುತ್ತಿದ್ದಾರೆ. ಪಟ್ಟಣದ ಮಿನಿ ವಿಧಾನಸೌಧವನ್ನು ಹಳೆಯ ಸಹಾಯಕ ಆಯುಕ್ತರ ಕಛೇರಿಗೆ ಸ್ಥಳಾಂತರ ಮಾಡಬೇಕು. ಲಿಂಗಸುಗೂರು ಸಾರಿಗೆ ಘಟಕದಲ್ಲಿ ಬಸ್‌ಗಳ ಕೊರತೆ ಇದ್ದು, ಕೂಡಲೇ 50 ಬಸ್‌ಗಳನ್ನು(2ನೇಪುಟಕ್ಕೆ)

## ಮೊದಲನೇಯ ಪುಟದಿಂದ

# ಕೆಪಿಎಂಇ, ಪಿಸಿಪಿಎನ್‌ಡಿಟಿ ಕಾಯ್ದೆಗಳ ಮಾರ್ಗಸೂಚಿ ಪಾಲನೆಯಾಗಲಿ: ನಿತೀಶ್ ಕೆ.

ಪರವಾನಗಿ ಇಲ್ಲದೆ ಆಸ್ಪತ್ರೆ ನಡೆಸುವವರ ವಿರುದ್ಧ ಕ್ರಮ ವಹಿಸಲು ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಸಮಿತಿ ರಚನೆ ಮಾಡಲಾಗಿದೆ. ಕೆಪಿಎಂಇ ಕಾಯ್ದೆ ಉಲ್ಲಂಘನೆ ಮಾಡುವ ಆಸ್ಪತ್ರೆಗಳ ವಿರುದ್ಧ ದಂಡ ವಿಧಿಸಿ ದೂರು ದಾಖಲು ಮಾಡಲಾಗುತ್ತದೆ ಎಂದು ತಿಳಿಸಿದರು.

ಕೆಪಿಎಂಇ ಕಾಯ್ದೆ ಜಾರಿಯಾಗಿ ಸುಮಾರು ವರ್ಷಗಳಾದರೂ ಪಾಲನೆ ಮಾಡದೇ ಇರುವುದರಿಂದ ಸಾಕಷ್ಟು ಅನಾಹುತಗಳು ನಡೆಯುತ್ತಿವೆ. ಜಿಲ್ಲೆಯಲ್ಲಿ ಎಲ್ಲಾ ಆಸ್ಪತ್ರೆಗಳು ಮತ್ತು ಕ್ಲಿನಿಕ್‌ಗಳು ಬಗ್ಗೆ ಮಾಹಿತಿ ಪಡೆದುಕೊಂಡು ಪರಿಶೀಲನೆ ಮಾಡಬೇಕು. ಐಎಂಎ ವೈದ್ಯಕೀಯ ಸಂಘವೂ ಇದಕ್ಕೆ ಬೆಂಬಲವಾಗಿದ್ದು, ಕಾಯ್ದೆಯನ್ನು ಪಾಲನೆ ಮಾಡುವಂತೆ ಹೇಳಿದರು.

ಈ ವೇಳೆ ಭಾರತೀಯ ವೈದ್ಯಕೀಯ ಸಂಘದ ಜಿಲ್ಲಾಧ್ಯಕ್ಷರಾದ ಶೈಲೇಶ ಅಮರಖೇಡ್ ಅವರು ಮಾತನಾಡಿ, ಜಿಲ್ಲೆಯಲ್ಲಿರುವ ಅನೇಕ ಆಸ್ಪತ್ರೆ ಮತ್ತು ಕ್ಲಿನಿಕ್‌ಗಳಿಗೆ ಕೆಪಿಎಂಇ ಕಾಯ್ದೆ ಬಗ್ಗೆ ಮಾಹಿತಿ ಇಲ್ಲ. ಇದ್ದರು ಸರಿಯಾಗಿ ಪಾಲನೆ ಮಾಡುತ್ತಿಲ್ಲ. 1994 ರಲ್ಲಿ ಕಾಯ್ದೆ ಜಾರಿಯಾಗಿದೆ. ಆಸ್ಪತ್ರೆಯಲ್ಲಿ ಗುಣಮಟ್ಟದ ಆರೋಗ್ಯವು ಪ್ರತಿಯೊಬ್ಬ ಜನಸಾಮಾನ್ಯರಿಗೂ ದೊರೆಯಲು ಈ ಕಾಯ್ದೆ ಜಾರಿಗೊಳಿಸಲಾಗಿದೆ. ಕೆಪಿಎಂಇ ಕಾಯ್ದೆ ಉಲ್ಲಂಘನೆ ಮಾಡುವುದು ಸರಿಯಲ್ಲ. ವೈದ್ಯಕೀಯ ವೃತ್ತಿಯಲ್ಲಿ ತೊಡಗಿಕೊಂಡಿರುವ ಪ್ರತಿಯೊಬ್ಬರು ಕಡ್ಡಾಯವಾಗಿ ನಿಯಮಗಳನ್ನು ಪಾಲನೆ ಮಾಡಬೇಕು ಎಂದರು.

ಈ ವೇಳ ಪಿಸಿಪಿಎನ್‌ಡಿಟಿ ಕಾಯ್ದೆಯ ಜಿಲ್ಲಾ ಸಲಹಾ ಸಮಿತಿ ಅಧ್ಯಕ್ಷರಾದ ಡಾ.ಶಿವಪ್ಪ ಮಾಲಿಪಾಟೀಲ್ ಅವರು ಮಾತನಾಡಿ, ಮಹಾರಾಷ್ಟ್ರ ರಾಜ್ಯವು ಪಿಸಿಪಿಎನ್‌ಡಿಟಿ ಕಾಯ್ದೆಯ ಜಾರಿ ತಂದ ಮೊದಲ ರಾಜ್ಯವಾಗಿದೆ. ಪ್ರಸವಪೂರ್ವ ರೋಗನಿರ್ಣಯ ತಂತ್ರಗಳ ಕಾಯ್ದೆಯನ್ನು 1994 ರಲ್ಲಿ ಅಂಗೀಕರಿಸಲಾಯಿತು ಎಂದರು. ಪಿಎನ್‌ಡಿಟಿ ನೋಂದಣಿ, ಎಮ್‌ಟಿಪಿ ನೋಂದಣಿ ಬಗ್ಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಬಸವಣ್ಣೆಪ್ಪ ಕುಲಶೆಟ್ಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಕೆ.ಪಿ.ಎಂ.ಇ. ಕಾಯ್ದೆ ರಾಜ್ಯ ಸಮಿತಿ ಸದಸ್ಯರಾದ ಡಾ.ಮಧುಸೂದನ್ ಕಾರಿಗನೂರು, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಿವಕುಮಾರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ವಿಭಾಗದ ಮುಖ್ಯಸ್ಥರಾದ ಡಾ.ಗಣೇಶ್, ಡಾ.ಎಂ.ಡಿ.ಶಾಕೀರ್, ಡಾ.ಚಂದ್ರಶೇಖರಯ್ಯ, ಡಾ.ಯಶೋಧ ಸೇರಿದಂತೆ ವಿವಿಧ ಖಾಸಗಿ ಆಸ್ಪತ್ರೆಯ ವೈದ್ಯರು ಹಾಗೂ ವ್ಯವಸ್ಥಾಪಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ವಿವಿಧ ಬೇಡಿಕೆಗೆ ಆಗ್ರಹಿಸಿ ಮುಖ್ಯಮಂತ್ರಿಗೆ ಕರವೇ ಮನವಿ

ಕೊಡಬೇಕು ಹಾಗೂ ಲಿಂಗಸುಗೂರು ರಿಂದ ಬೆಂಗಳೂರಿಗೆ ಹವಾನಿಯಂತ್ರಿತ ಅತ್ಯಾಧುನಿಕ 10 ಬಸ್‌ಗಳ ಹೆಚ್ಚುವರಿಯಾಗಿ ಮಂಜೂರು ಮಾಡಬೇಕು.

ವಿದ್ಯಾಕಾಶಿಯಾಗಿ ಪ್ರಸಿದ್ಧಿ ಪಡೆಯುತ್ತಿರುವ ತಾಲೂಕಿಗೆ ಮೆಡಿಕಲ್ ಕಾಲೇಜುಗಳನ್ನು ಮಂಜೂರು ಮಾಡಬೇಕು. ಹಾಗೂ ಇಂಜಿನಿಯರಿಂಗ್, ಕೃಷ್ಣಾ ನದಿಯ ನಡುಗಡ್ಡ ಪ್ರದೇಶಗಳಾದ ಮಾದರಗಡ್ಡಿ, ಕರಕಲಗಡ್ಡಿ, ವ್ಯಾಕಮನದೊಡ್ಡಿಗಳ ಜನರಿಗೆ ಶಾಶ್ವತ ಪರಿಹಾರ ಒದಗಿಸಬೇಕು. ತಾಲೂಕಿನಲ್ಲಿ ನಿರುದ್ಯೋಗಿ ಯುವಕರು ಹೆಚ್ಚಾಗಿದ್ದು, ಉದ್ಯೋಗಕ್ಕಾಗಿ ದೂರದ ನಗರ ಪ್ರದೇಶಗಳಿಗೆ ವಲಸೆ ಹೋಗುತ್ತಿದ್ದಾರೆ. ತಾಲೂಕಿನಲ್ಲಿ ಖನಿಜ ಸಂಪತ್ತು. ಜಲಸಂಪತ್ತು ಹಾಗೂ ನೈಸರ್ಗಿಕ ಸಂಪನ್ಮೂಲಗಳು ಹೇರಳವಾಗಿದ್ದು, ಕೈಗಾರಿಕೆಗಳ ಸ್ಥಾಪನೆಗೆ ಸೂಕ್ತವಾಗದ ಸ್ಥಳವಾಗಿದ್ದು, ಕೂಡಲೇ ತಾಲೂಕಿನಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ನಿರುದ್ಯೋಗಿ ಯುವಕರಿಗೆ ಉದ್ಯೋಗವನ್ನು ಒದಗಿಸಿಕೊಡಬೇಕು.

ತಾಲೂಕಿನಲ್ಲಿ ಜನಸಂದಣಿ ಹೆಚ್ಚಾಗಿದ್ದು, ಸಂಚಾರ ದಟ್ಟಣೆ ಹೆಚ್ಚಾಗಿರುತ್ತದೆ. ಆದ್ದರಿಂದ ಸಂಚಾರಿ ಪೊಲೀಸ್ ಠಾಣೆ ಮಂಜೂರು ಮಾಡಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

# “ಮನೆ ಮನೆಗೆ ಪೊಲೀಸ್” ಜನಸ್ನೇಹಿ ಯೋಜನೆ : ಪಿಎಸ್‌ಐ ನಿರ್ಣೇ

**ಔರಾದ್,ಆ.07–**ಸಾರ್ವಜನಿಕರು ಯಾವುದೇ ರೀತಿಯ ಸಮಸ್ಯೆಗಳಿಗೆ ಭಯಪಡುವ ಅಗತ್ಯವಿಲ್ಲ. ನಿಮ್ಮ ಅಗತ್ಯ ನೆರವಿಗೆ ಪೋಲಿಸರು ಸದಾ ಸಿದ್ದರಿದ್ದೇವೆ ಎಂದು ಚಿಂತಾಕಿ ಪೊಲೀಸ್ ಠಾಣೆಯ ಪಿಎಸ್‌ಐ ಚಂದ್ರಶೇಖರ ನಿರ್ಣೆ ಹೇಳಿದರು.

ಬುಧವಾರ ತಾಲೂಕಿನ ಮೇಡಪಳ್ಳಿಯಲ್ಲಿ ಚಿಂತಾಕಿ ಪೊಲೀಸ್ ಠಾಣೆಯಿಂದ ಏರ್ಪಡಿಸಿದ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಜನರಿಗೆ ಮಾಹಿತಿ ನೀಡಿ ಮಾತನಾಡಿದ ಅವರು, ಭಯ ಪಡುವ ಅಗತ್ಯವಿಲ್ಲ. ಏಕೆಂದರೆ, ಕರ್ನಾಟಕ ಸರ್ಕಾರವು ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ನಿರ್ಮಿಸುವ ಮಹತ್ತರ ಉದ್ದೇಶದಿಂದ ‘ಮನೆ ಮನೆಗೆ ಪೊಲೀಸ್’ ಎಂಬ ವಿನೂತನ ಯೋಜನೆಯನ್ನು ಪ್ರಾರಂಭಿಸಿದೆ. ಕಾನೂನು ಜಾರಿ ಸಂಸ್ಥೆಗಳು ಮತ್ತು ಸಾರ್ವಜನಿಕರ ನಡುವೆ ವಿಶ್ವಾಸ, ಸುರಕ್ಷತೆ ಮತ್ತು ನೇರ ಸಂಪರ್ಕವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಯೋಜನೆಯಾಗಿದೆ. ಇದರಿಂದ ಸಾರ್ವಜನಿಕರಿಗೆ ಎಲ್ಲ ರೀತಿಯ ಅನುಕೂಲಗಳಿವೆ. ಪ್ರತಿ ಮನೆಗೂ ಪೊಲೀಸರು ಭೇಟಿ ನೀಡಿ, ಜನರ ಸಮಸ್ಯೆಗಳನ್ನು ಆಲಿಸಿ, ಅಗತ್ಯ ಕ್ರಮ ಕೈಗೊಳ್ಳಲಿದ್ದಾರೆ. ಇದರಿಂದಾಗಿ ಕಾನೂನಿಗೆ ಸಂಬಂಧಿತ ಸಮಸ್ಯೆಗಳ ಬಗ್ಗೆ ಅರಿವು ಮೂಡಿಸಲು ಮತ್ತು ಪೊಲೀಸ್ ಇಲಾಖೆಗೆ ಅಗತ್ಯವಿರುವ ಮಾಹಿತಿಯನ್ನು ಸಂಗ್ರಹಿಸಲು ಸಹಾಯವಾಗಲಿದೆ. ಸಾರ್ವಜನಿಕರೊಂದಿಗೆ ಪೊಲೀಸರು ಉತ್ತಮ ಹಾಗೂ ಸ್ನೇಹಪರ ಸಂಬಂಧವನ್ನು ಬೆಸೆದುಕೊಳ್ಳಲು ಅನುಕೂಲಕರ ವಾತಾವರಣ ನಿರ್ಮಾಣವಾಗುತ್ತದೆ.




ಸ್ಥಳೀಯರಿಂದ ಸೂಕ್ಷ್ಮ ಮಾಹಿತಿಗಳನ್ನು ಪಡೆದುಕೊಳ್ಳಲು, ಅಪರಾಧಗಳನ್ನು ತಡೆಯಲು ಹಾಗೂ ಅಪರಾಧ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ಪತ್ತೆ ಮಾಡಲು ಸಾಧ್ಯವಾಗುತ್ತದೆ. ಪೊಲೀಸ್ ವ್ಯವಸ್ಥೆಯಲ್ಲಿ ಸಾರ್ವಜನಿಕ ಸಹಭಾಗಿತ್ವ ಹೆಚ್ಚಾಗಿ, ಇಲಾಖೆ, ಸಾರ್ವಜನಿಕ ಸ್ನೇಹಿಯಾಗಿಸಿ, ಸಮಾಜಕ್ಕೆ ಉತ್ತಮ ಪೊಲೀಸ್ ಸೇವೆಯನ್ನು ಒದಗಿಸಬಹುದಾಗಿದೆ ಎಂದರು. ಇದೇ ವೇಳೆ 112 ಸಹಾಯ , ಬಾಲ್ಯ ವಿವಾಹ ಪದ್ದತಿ, ವರದಕ್ಷಿಣೆ ಪಿಡುಗುಗಳಂತಹ ಸಮಸ್ಯೆಗಳಿದ್ದರೇ ಠಾಣೆಗೆ ಬಂದು ಸಮಸ್ಯೆ ಬಗೆಹರಿಸಿಕೊಳ್ಳುವ ಬಗ್ಗೆ ತಿಳಿಸಲಾಯಿತು.

ಈ ಸಂಧರ್ಭದಲ್ಲಿ ಪೇಥೆ ತಿರುಪತಿ, ಕಂಠಯ್ಯ ಸ್ವಾಮಿ, ಶಿವಾಜಿರಾವ್ ಬಿರಾದರ್, ಪ್ರಕಾಶ ಬಿರಕುರೆ, ಶ್ರೀಪಾದ್ ಸ್ವಾಮಿ , ದೀಲೀಪ್ ಪಾಟೀಲ್, ರಾಜೇಪ್ಪ ಪಾಟೀಲ್, ಸಿದ್ದಯ್ಯ ಸ್ವಾಮಿ, ಅಣ್ಣಾರಾವ್ ಬಿರಾದರ್, ಶ್ಯಾಮಪ್ಪ, ಯೇಶೇಪ್ಪ ಇದ್ದರು.

# ಸೆಪ್ಟೆಂಬರ್ 16, 17, 18 ರಂದು ರಾಜ್ಯ ಮಟ್ಟದ ರೈತ ಶಿಬಿರ

**ಬಳ್ಳಾರಿ, ಆ.07–** ತಾಲ್ಲೂಕಿನ ಮುದ್ದಟನೂರು ಗ್ರಾಮದಲ್ಲಿ ಎ ಐಕೆಕೆಎಂಎಸ್ ರೈತ ಸಂಘಟನೆ ವತಿಯಿಂದ ರೈತರ ಶಿಬಿರದ ಬಗ್ಗೆ ಪ್ರಚಾರ ಮಾಡಲಾಯಿತು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ ಮಾತನಾಡುತ್ತಾ ಸೆಪ್ಟೆಂಬರ್ 16,17 ಮತ್ತು 18 ರಂದು ಮೂರು ದಿನಗಳ ಕಾಲ ರೈತರ ಸಮಸ್ಯೆಗಳ ಪರಿಹಾರಕ್ಕಾಗಿ ಚರ್ಚಿಸಲು ರಾಜ್ಯ ಮಟ್ಟದ ರೈತ ಕೃಷಿ ಕಾರ್ಮಿಕರ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ, ಈ ಶಿಬಿರದಲ್ಲಿ ರೈತರ ಬೆಳೆಗಳಿಗೆ ಏಕೆ ಬೆಂಬಲ ಬೆಲೆ ಸಿಗುತ್ತಿಲ್ಲ, ಬೀಜ, ರಸ ಗೊಬ್ಬರಗಳು ಯಾಕೆ ದಿನದಿಂದ ದಿನಕ್ಕೆ ಬೆಲೆ ಹೆಚ್ಚಾಗುತ್ತಿವೆ, ಸರ್ಕಾರಗಕು ಯಾಕೆ ಎಲ್ಲಾ ಬೆಳೆಗಳನ್ನು ಖರಿಧಿ ಮಾಡುತ್ತಿಲ್ಲ ಈ ಎಲ್ಲಾ ಸಮಸ್ಯೆಗಳ ಪರಿಹಾರಕ್ಕಾಗಿ ನಾವು ಮಾಡಬೇಕಾದ ಕಾರ್ಯವೇನು ಎಂಬುದು ಸೇರಿದಂತೆ ಹಲವಾರು ವಿಷಯಗಳು ಚರ್ಚೆಯಾಗುತ್ತಿದ್ದು ತಾಲ್ಲೂಕಿನ ಎಲ್ಲಾ ರೈತರು ಈ ಶಿಬಿರದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು

ಈ ಶಿಬಿರದಲ್ಲಿ ಭಾಗವಹಿಸಲು 9972690319/9742994490 ಸಂಖ್ಯೆಗೆ ಕರೆ ಮಾಡಬಹುದು ಎಂದರು.ಈ ಸಂದರ್ಭದಲ್ಲಿ ರೈತರಾದ ಚಂದ್ರಪ್ಪ, ಚಿದಾನಂದಪ್ಪ, ನಾಗರಾಜ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಡಿ.ದೇವರಾಜು ಅರಸು ಜಯಂತಿ: ಅರ್ಥಪೂರ್ಣ ಆಚರಣೆಗೆ ಸೂಚನೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.7–** ಜಿಲ್ಲೆಯಲ್ಲಿ ಆಗಸ್ಟ್ 20 ರಂದು ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಗಸ್ಟ್ 7ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 9ಕ್ಕೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಮೆರವಣಿಗೆಯು ಅಚ್ಚುಕಟ್ಟಾಗಿ ನಡೆಯಬೇಕು. ಬಳಿಕ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರವು ಸುವ್ಯಸ್ಥಿತವಾಗಿ ನಡೆಯುವಂತಾಗಬೇಕು. ಜಯಂತಿ ಹಿನ್ನೆಲೆಯಲ್ಲಿ ಅಂದು ನಗರದ ಎಲ್ಲಾ ವೃತ್ತಗಳಲ್ಲಿ ಮತ್ತು ಪ್ರಮುಖ ರಸ್ತೆಗಳಲ್ಲಿ ಹಾಗೂ ಜಿಲ್ಲಾ ರಂಗಮಂದಿರದ ಹೊರಾಂಗಣ ಮತ್ತು ಒಳಾಂಗಣದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಯಾ ತಾಲೂಕಿನ ತಹಸೀಲ್ದಾರರು ತಾಲೂಕುಮಟ್ಟದಲ್ಲಿ ದಿನಾಚರಣೆ ಆಚರಿಸಲು ಕ್ರಮ ವಹಿಸಬೇಕು. ಜನ ಪ್ರತಿನಿಧಿಗಳ, ಸಂಘ ಸಂಸ್ಥೆಗಳ ಮತ್ತು ಅಧಿಕಾರಿಗಳ ಸಭೆ ಕರೆದು ಸಮಾಲೋಚಿಸಿ ತಾಲೂಕು ಕೇಂದ್ರಗಳಲ್ಲಿ ಅರ್ಥಪೂರ್ಣವಾಗಿ ದಿನಾಚರಣೆ ನಡೆಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಹಸೀಲ್ದಾರರಿಗೆ ಸೂಚನೆ ನೀಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರ ಕಚೇರಿಯಿಂದ ಸುತ್ತೋಲೆ ಹೊರಡಿಸಿ ತಿಳಿಸಿದಂತೆ ಡಿ. ದೇವರಾಜು ಅವರ ಜನ್ಮ ದಿನಾಚರಣೆಯನ್ನು ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಲ್ಲಿ, ಆಶ್ರಮ ಶಾಲೆಗಳಲ್ಲಿ, ಖಾಸಗಿ ಮೆಟ್ರಿಕ್ ಪೂರ್ವ ಮತ್ತು ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಆಗಸ್ಟ್ 20 ರಂದು ಕಡ್ಡಾಯ ಆಚರಿಸಲು ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು, ಬಿಸಿಎಂ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

ಭೂ ಸುಧಾರಣೆ ಕಾಯಿದೆಯಂತಹ ಜನಪರ ಯೋಜನೆಗಳನ್ನು ರೂಪಿಸಿ ಕಾರ್ಯನುಷ್ಠಾನಕ್ಕೆ ತಂದ ಡಿ.ದೇವರಾಜ ಅರಸು ಅವರ ವ್ಯಕ್ತಿತ್ವದ ಬಗ್ಗೆ ಇಂದಿನ ಯುವ ಸಮುದಾಯಕ್ಕೆ ಸಂದೇಶ ಹೋಗುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿನ ವಿವಿಧ ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಭಾಷಣ ಸ್ಪರ್ಧೆ ಹಾಗು ಇನ್ನಿತರ ಸ್ಪರ್ಧೆಗಳನ್ನು ಆಯೋಜನೆ ಮಾಡಿ ಬಹುಮಾನ ವಿತರಣೆಗೆ ಕ್ರಮ ವಹಿಸಬೇಕು ಎಂದು ಇದೆ ವೇಳೆ ಅಪರ ಜಿಲ್ಲಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಅಶೋಕ ಅವರಿಗೆ ಸೂಚನೆ ನೀಡಿದರು.

2024–25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ., ಪಿ.ಯು.ಸಿ ಹಾಗೂ ಸ್ನಾತಕೋತ್ತರ ಪದವಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಬಿಸಿಎಂ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳನ್ನು ಗುರುತಿಸಿ ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸಬೇಕು. ಹಿಂದುಳಿದ ಸಮುದಾಯಗಳ ಒಕ್ಕೂಟದ ಗಣ್ಯರಿಗೆ ವೇದಿಕೆಗೆ ಅವಕಾಶ ಕಲ್ಪಿಸಿಕೊಡಬೇಕು. ಉತ್ತಮ ಸಂಪನ್ಮೂಲ ವ್ಯಕ್ತಿಗಳಿಂದ ಡಿ.ದೇವರಾಜು ಅರಸು ಅವರ ಕುರಿತು ಉಪನ್ಯಾಸ ಏರ್ಪಡಿಸಬೇಕು. ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರದ ಉಪನ್ಯಾಸಕರಾದ ವೆಂಕಟೇಶ ಅವರನ್ನು ಉಪನ್ಯಾಸಕರೆಂದು ಆಹ್ವಾನ ನೀಡಬೇಕು ಎಂದು ಸಭೆಯಲ್ಲಿದ್ದ ವಿವಿಧ ಸಮುದಾಯದ ಮುಖಂಡರು ಸಭೆಗೆ ಸಲಹೆ ಮಾಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಡಾ.ಅಶೋಕ ವಿ ಹಾಗೂ ಪತ್ರಾಂಕಿತ ವ್ಯವಸ್ಥಾಪಕರಾದ ಪಂಕಜ ಅವರು ದಿನಾಚರಣೆಗೆ ಸಂಬಂಧಿಸಿದ ಸರ್ಕಾರದ ಸುತ್ತೋಲೆಗಳನ್ನು ಸಭೆಗೆ ಓದಿ ಹೇಳಿದರು.

ಸಭೆಯಲ್ಲಿ ವಿವಿಧ ಸಂಘ ಸಂಸ್ಥೆಗಳ ಪ್ರಮುಖರಾದ ಕೆ.ಶಾಂತಪ್ಪ, ಟಿ.ಕಾಜನಗೌಡ, ಹನುಮಂತಪ್ಪ, ಭಗತರಾಜ ನಿಜಾಮಕಾರಿ, ಪಾಗುಂಡಪ್ಪ, ಎಂ.ಚಂದಶೇಖರ, ರಂಗನಾಥ, ಆಂಜನೇಯ ಯಾದವ, ಸುರೇಖಾ ಪಿ, ವಿಜಯಭಾಸ್ಕರ ಇಟಗಿ, ಹಿರಿಯ ಪತ್ರಕರ್ತರಾದ ಬಿ ವೆಂಕಟಸಿಂಗ್, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಲಿಂಗರಾಜ ಸೇರಿದಂತೆ ಇನ್ನಿತರ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

# ಬೀದರ್ ದಕ್ಷಿಣ ಕುಂದು ಕೊರತೆ ಆಲಿಕೆ ಕಚೇರಿ ಉದ್ಘಾಟನೆ

**ಬೀದರ್,ಆ.07–**ಚಿಟಗುಪ್ಪ ತಾಲ್ಲೂಕಿನ ಮನ್ನಾಎಖ್ವೆಳ್ಳಿಯಲ್ಲಿ ರಾಜ್ಯ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಸಂಜಯ್ ಜಾಗೀರದಾರ್ ಅವರು ಬೀದರ್ ದಕ್ಷಿಣ ಕ್ಷೇತ್ರದ ಎಲ್ಲ ಸಮುದಾಯಗಳ ಕುಂದು ಕೊರತೆ ಆಲಿಕೆ ಕಚೇರಿಯನ್ನು ಆರಂಭಿಸಿದ್ದಾರೆ.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಜನರ ಕುಂದು ಕೊರತೆ ಆಲಿಸಿ, ಪರಿಹರಿಸಲು ಕಚೇರಿ ಆರಂಭಿಸಲಾಗಿದೆ ಎಂದು ಬುಧವಾರ ಕಚೇರಿಯನ್ನು ಉದ್ಘಾಟಿಸಿದ ಸಂಜಯ್ ಜಾಗೀರದಾರ್ ಹೇಳಿದರು.

ಕಚೇರಿಯಲ್ಲಿ ಕಂಪ್ಯೂಟರ್, ಸಿಬ್ಬಂದಿ ಇರಲಿದ್ದಾರೆ. ಏನೇ ಸಮಸ್ಯೆಗಳಿದ್ದರೂ ಕ್ಷೇತ್ರದ ಜನ ಕಚೇರಿಯನ್ನು ಅಥವಾ ನೇರವಾಗಿ ತಮ್ಮನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಕಚೇರಿ ಸಿಬ್ಬಂದಿ ವಿದ್ಯಾರ್ಥಿಗಳ ಶಿಷ್ಯವೇತನ, ವೃದ್ಧಾಪ್ಯ ವೇತನ, ವಿಧವಾ ವೇತನ ಮತ್ತಿತರ ಸರ್ಕಾರದ ವಿವಿಧ ಯೋಜನೆಗಳ ಅರ್ಜಿ ಸಲ್ಲಿಕೆಗೆ ನೆರವಾಗಲಿದ್ದಾರೆ. ಸರ್ಕಾರದ ಯೋಜನೆಗಳ ಮಾಹಿತಿ ನೀಡಲಿದ್ದಾರೆ ಎಂದು ಹೇಳಿದರು.

ಜನ ಜಾಗೃತರಾದರೆ ಪ್ರತಿಯೊಂದು ಸಮಸ್ಯೆಗೂ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ಹೀಗಾಗಿ ಸಾರ್ವಜನಿಕರು



ಮೂಲಸೌಕರ್ಯ ಸೇರಿದಂತೆ ಯಾವುದೇ ಸಮಸ್ಯೆ ಗಮನಕ್ಕೆ ತಂದರೆ, ಬಗೆಹರಿಸಲು ಪ್ರಯತ್ನಿಸಲಾಗುವುದು. ಸಾರ್ವಜನಿಕರು ಕಚೇರಿಯ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸುವ ದಿಸೆಯಲ್ಲಿ ಜಾಗೀರದಾರ್ ಅವರು ಕಚೇರಿ ಆರಂಭಿಸಿರುವುದು ಉತ್ತಮ ಬೆಳವಣಿಗೆ ಎಂದು ಪ್ರಮುಖರಾದ ಶಿರೋಮಣಿ ಹೇಳಿದರು.

ಪ್ರಮುಖರಾದ ಪಾಸ್ಟರ್ ವಿಲ್ಸನ್, ಮೋಜಸ್, ಜೀವನ್ ಜಾಗೀರದಾರ್, ಜಾಕೋಬ್ ಮುಸ್ತಾಪುರಕರ್, ಥಾಮಸ್, ಜಡಸನ್, ಧನರಾಜ, ರಿಜಾಯಿಸ್, ಯೇಸುದಾಸ್, ಸುನೀಲ್ ಕೋಟೆ, ಮಹಾಂತೇಶ್, ಜೇಮ್ಸ್, ಯೋಹಾನ್, ವಿಜಯಕುಮಾರ ಹಳ್ಳಿಖೇಡ್ ಮತ್ತಿತರರು ಇದ್ದರು.

# ಮಗಳ ಮದುವೆಗೆ ತಂದಿರಿಸಿದ್ದ ಸುತ್ತುಂಗರ ಸೇರಿ 5.37 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

**ಕಲಬುರಗಿ,ಆ.07–**ತಂದೆಯೊಬ್ಬ ತನ್ನ ಬಳಿ ಇದ್ದ 15 ಕುರಿ ಮತ್ತು ಕುರಿಗಳ ಗೊಬ್ಬರ ಮಾರಿ ಮಗಳ ಮದುವೆಗೆಂದು ಮನೆಯಲ್ಲಿ ತಂದಿರಿಸಿದ್ದ ಸುತ್ತುಂಗುರಗಳು ಸೇರಿ 1.75 ಲಕ್ಷ ರೂ.ಮೌಲ್ಯದ ಚಿನ್ನಾಭರಣವನ್ನು ಕಳ್ಳರು ಕಳವು ಮಾಡಿಕೊಂಡು ಹೋಗಿರುವ ಘಟನೆ ತಾಡತೆಗನೂರ ಗ್ರಾಮದಲ್ಲಿ ನಡೆದಿದೆ.

ಬಸವರಾಜ ಪೂಜಾರಿ ಎಂಬುವವರ ಮನೆಯ ಬೀಗ ತೆರೆದು ಕಳ್ಳರು ಮನೆಯಲ್ಲಿದ್ದ ತಲಾ 5 ಗ್ರಾಂ.ಬಂಗಾರದ 5 ಸುತ್ತುಂಗುರಗಳು, 60 ಸಾವಿರ ರೂ.ಮೌಲ್ಯದ 7 ಗ್ರಾಂ.ಬಂಗಾರದ ಬೋರಮಳ, 60 ಸಾವಿರ ರೂ.ಮೌಲ್ಯದ 6 ಗ್ರಾಂ. ಚಿಕ್ಕ ಸರ, 10 ಸಾವಿರ ರೂ.ಮೌಲ್ಯದ 2 ಗ್ರಾಂ.ಜುಮಕಿ, 8 ಸಾವಿರ ರೂ. ಮೌಲ್ಯದ 1 ಗ್ರಾಂ.ಕಿವಿ ಮುರು, 4 ಸಾವಿರ ರೂ.ಮೌಲ್ಯದ 2 ಗ್ರಾಂ.ಬಂಗಾರದ 2 ಜೊತೆ ಕಿವಿ ಕಡ್ಡಿ, 8 ಸಾವಿರ ರೂ.ಮೌಲ್ಯದ 1 ಗ್ರಾಂ.ಬಂಗಾರದ 3 ಬಿಗಡಿ ಕಡ್ಡಿ, 12500 25 ತೊಲಿ ಬೆಳ್ಳಿ ಕಾಲು ಚೈನ, ಹಾಲಗಡಗ, ಉಡದಾರ ಸೇರಿ 3.62 ಲಕ್ಷ ರೂ.ಮೌಲ್ಯದ ಬಂಗಾರ ಮತ್ತು ಬೆಳ್ಳಿ ಆಭರಣ ಮತ್ತು 1.75 ಲಕ್ಷ ನಗದು ಸೇರಿ 5.37 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿಕೊಂಡು ಹೋಗಿದ್ದಾರೆ. ಬಸವರಾಜ ಅವರು ಮನೆಗೆ ಬೀಗ ಹಾಕಿ ಬೀಗದ ಕೈಯನ್ನು ಮಾಡಾದಲ್ಲಿ ಇಟ್ಟಿದ್ದರು. ಕಳ್ಳರು ಮನೆ ಬೀಗ ತೆರೆದು ಚಿನ್ನ, ಬೆ ಳ್ಳಿ ಆಭರಣ ಮತ್ತು ನಗದು ಹಣ ದೋಚಿಕೊಂಡು ಮತ್ತೆ ಮನೆಗೆ ಬೀಗ ಹಾಕಿ ಬೀಗದ ಕೈಯನ್ನು ಮಾಡಾದಲ್ಲಿ ಇಟ್ಟು ಹೋಗಿದ್ದಾರೆ ಎಂದು ತಿಳಿದುಬಂದಿದೆ.

# ಪವರ್ ಸ್ಟಾರ್ ರಾಯಚೂರಿನಲ್ಲಿ ಸೇನಾ ನೇಮಕಾತಿಯ ಅಗ್ನಿಪರೀಕ್ಷೆ: ಇಂದಿನಿಂದ ಆರಂಭ





ರಾಯಚೂರು,ಆ.07–ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯು ಥರ್ಮಲ್ ಪಾವರ್ ಸ್ಟೇಷನ್, ಶಕ್ತಿ ಸ್ಥಾವರ ಖ್ಯಾತಿಯ ರಾಯಚೂರಿನ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಆಗಸ್ಟ್ 08ರಿಂದ ಆರಂಭವಾಗಲಿದೆ.

ಆಗಸ್ಟ್ 8 ರಿಂದ ಆಗಸ್ಟ್ 22ರವರೆಗೆ ಹಾಗೂ ಆಗಸ್ಟ್ 25ರಂದು ಶಾರಿರೀಕ ದೇಹದಾರ್ಢ್ಯ ಪರೀಕ್ಷೆ ಮತ್ತು ಆಗಸ್ಟ್ 26ರಂದು ವೈದ್ಯಕೀಯ ಪರೀಕ್ಷೆ ನಡೆಯಲಿದ್ದು, ಪ್ರವೇಶ ಪತ್ರದಲ್ಲಿ ನೀಡಲಾದ ದಿನಾಂಕಗಳಂತೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳ ಅಭ್ಯರ್ಥಿಗಳು ರಾಯಚೂರಿನಲ್ಲಿ ನಡೆಯುವ ಈ ಸೇನಾ ನೇಮಕಾತಿ ರ್‍ಯಾಲಿಗೆ ವರದಿ ಮಾಡಿಕೊಳ್ಳಲಿದ್ದಾರೆ.

ಸೇನೆಯಲ್ಲಿ ಎಲ್ಲ ವಿಭಾಗಗಳ ಆಯ್ಕೆಯಾಗಿ ನಡೆಯುವ ಸೇನಾ ನೇಮಕಾತಿ ರ್‍ಯಾಲಿಗೆ ರಾಯಚೂರು ನಗರದಲ್ಲಿನ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ವಿಶಾಲ ಆವರಣವು ಸಿದ್ಧಗೊಂಡಿದ್ದು, ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಹಿನ್ನೆಲೆಯ ಎಲ್ಲ ಕಾರ್ಯಚಟುವಟಿಕೆಗಳು ಆಗಸ್ಟ್ 8 ರಿಂದ ಆರಂಭವಾಗಿ ಆಗಸ್ಟ್ 26ರವರೆಗೆ ನಡೆಯಲಿವೆ.

ಆಯ್ಕೆ ಪ್ರಕ್ರಿಯೆಯಲ್ಲಿ ಭಾಗಿಯಾಗುವ ಅಭ್ಯರ್ಥಿಗಳಿಗೆ ಅನುಕೂಲವಾಗಲು ವಿಶ್ವ ವಿದ್ಯಾಲಯದ ಆವರಣದಲ್ಲಿ ಪೆಂಡಾಲ್ ಹಾಕಿ ನೆರಳಿನ ವ್ಯವಸ್ಥೆ ಮಾಡಲಾಗಿದೆ. ಕುಡಿಯುವ ನೀರಿನ ಪೂರೈಕೆ, ಮೊಬೈಲ್ ಟಾಯ್ಲೆಟ್ ಸೇರಿದಂತೆ ನಾನಾ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಬೇರೆ ಬೇರೆ ಜಿಲ್ಲೆಗಳಿಂದ ಭಾಗಿಯಾಗಲು ವಿವಿಧೆಡೆ ವಸತಿ ಸೌಕರ್ಯ ಮತ್ತು ಸಾರಿಗೆ ವ್ಯವಸ್ಥೆ ಸೇರಿದಂತೆ ನಾನಾ ಸೌಕರ್ಯ ಕಲ್ಪಿಸಲಾಗಿದೆ.

ಈ ಸೇನಾ ನೇಮಕಾತಿ ರ್‍ಯಾಲಿ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನೊಳಗೊಂಡು ಸಮಿತಿಗಳನ್ನು ರಚಿಸಿ ಸುವ್ಯವಸ್ಥೆಗೆ ಕ್ರಮ ವಹಿಸಿದ್ದಾರೆ. ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರು ಮೇಲುಸ್ತುವಾರಿ ವಹಿಸಿದ್ದು, ತಹಸೀಲ್ದಾರರಾದ ಸುರೇಶ ವರ್ಮಾ, ಅಧಿಕಾರಿಗಳಾದ ಕೃಷ್ಣ ಶಾವಂತಗೇರಿ ಸೇರಿದಂತೆ ಇನ್ನಿತರ ಇಲಾಖೆಗಳ ಅಧಿಕಾರಿಗಳು ವಿವಿಧ ಸಮಿತಿಗಳ ನೇತೃತ್ವ ವಹಿಸಿದ್ದಾರೆ.

ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯ ಯಶಸ್ಸಿಗೆ ಸಂಬಂಧಿಸಿದಂತೆ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹತ್ತಾರು ಸಭೆಗಳನ್ನು ನಡೆಸಿ ಆಯಾ ಸಮಿತಿಗಳಿಗೆ ನಾನಾ ಕೆಲಸ ಕಾರ್ಯಗಳನ್ನು ಹಂಚಿಕೆ ಮಾಡಿದಂತೆ ಆಯಾ ಸಮಿತಿಗಳ ಅಧ್ಯಕ್ಷರು ಹಾಗೂ ಸದಸ್ಯ ಕಾರ್ಯದರ್ಶಿಗಳು ಮತ್ತು ಸದಸ್ಯರಾದ ವಿವಿಧ ಇಲಾಖೆಯ ಅಧಿಕಾರಿಗಳು ಆಯಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಕಚೇರಿ ಅದೇಶದ ಮೂಲಕ ನಾನಾ ಕೆಲಸ ಕಾರ್ಯಗಳ ಹಂಚಿಕೆ ಮಾಡಿ ಕಾರ್ಯಪ್ರವೃತ್ತರಾಗಿದ್ದಾರೆ.

ಸೇನಾ ನೇಮಕಾತಿ ರ್‍ಯಾಲಿ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಅವರು ಜಿಲ್ಲಾ ಪೊಲೀಸ್ ಇಲಾಖೆಯಿಂದ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಆವರಣದಲ್ಲಿ ಬ್ಯಾರಿಕೇಡ್ ಅಳವಡಿಸಿ, ಅಗತ್ಯ ಪ್ರಮಾಣದಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನಿಯೋಜಿಸಿ ಸೂಕ್ತ ಪೊಲೀಸ್ ಭದ್ರತೆಗೆ ಕ್ರಮವಹಿಸಿದ್ದಾರೆ.

ಸೇನಾ ಅಧಿಕಾರಿಗಳು ಭಾಗಿ: ಬೆಳಗಾವಿಯ ಸೇನಾ ನೇಮಕಾತಿ ಕಚೇರಿಯಿಂದ ಈ ಸೇನ ನೇಮಕಾತಿ ರ್‍ಯಾಲಿ ಪ್ರಕ್ರಿಯೆ ನಡೆಯಲಿದ್ದು, ಸೇನಾ ಅಧಿಕಾರಿ ಎಆರ್‌ಓ ಮನೋಜ್ ಸೇರಿದಂತೆ ಅನೇಕ ಅಧಿಕಾರಿಗಳು ಹಲವಾರು ದಿನಗಳಿಂದ ರಾಯಚೂರ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಆವರಣದಲ್ಲಿದ್ದು ಸೇನಾ ನೇಮಕಾತಿ ರ್‍ಯಾಲಿಯ ನಾನಾ ಪ್ರಕ್ರಿಯೆಗಳನ್ನು ನಡೆಸಿ ಸಿದ್ಧತೆ ಮಾಡಿದ್ದಾರೆ.

2017ರಲ್ಲಿ ನಡೆದಿತ್ತು: ಮಹತ್ವದ ಸೇನಾ ಭರ್ತಿ ರ್‍ಯಾಲಿಯು ಈ ಹಿಂದೆ ರಾಯಚೂರ ಜಿಲ್ಲೆಯಲ್ಲಿ 2017ರಲ್ಲಿ 11 ದಿನಗಳ ಕಾಲ ನಡೆದಿತ್ತು. ಆ ವೇಳೆ ರಾಯಚೂರ ಜಿಲ್ಲೆಯ ಸಾರ್ವಜನಿಕರು ದವಸ ಧಾನ್ಯ ನೀಡಿ ಸಹಕರಿಸಿದ್ದು ನಮಗೆ ಈಗಲೂ ನೆನಪಿದೆ. ಅದಾದ ಬಳಿಕ ಇದೀಗ ಮತ್ತೆ ನಮ್ಮ ಜಿಲ್ಲೆಯಲ್ಲಿ ಸೇನಾ ನೇಮಕಾತಿ ರ್‍ಯಾಲಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿ. ಈ ರ್‍ಯಾಲಿಗೆ ಬರುವ ಅಭ್ಯರ್ಥಿಗಳಿಗೆ ಊಟ, ವಸತಿಗೆ ಸಹಾಯ ಮಾಡೋಣ. ಎಲ್ಲ ಕಾರ್ಯಗಳಿಗೆ ಸಹಕಾರ ನೀಡಿ ರ್‍ಯಾಲಿಯನ್ನು ಯಶಗೊಳಿಸೋಣ ಎನ್ನುತ್ತಾರೆ ಮಾಜಿ ಸೈನಿಕರಾದ ಚೆನ್ನಾ ರೆಡ್ಡಿ.

ರಾಯಚೂರಿನತ್ತ ಬರುತ್ತಿರುವ ಅಭ್ಯರ್ಥಿಗಳು: ರಾಯಚೂರ ಸೇರಿದಂತೆ ಬೆಳಗಾವಿ, ಬೀದರ, ಕಲಬುರಗಿ, ಕೊಪ್ಪಳ ಮತ್ತು ಯಾದಗಿರಿ ಜಿಲ್ಲೆಗಳಿಂದ ಪ್ರಥಮ ಹಂತದಲ್ಲಿ ಆಯ್ಕೆಯಾದ ಅಂದಾಜು 15,000 ಅಭ್ಯರ್ಥಿಗಳು ಈ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಭಾಗವಹಿಸುತ್ತಿದ್ದು, ಸೇನೆ ಸೇರಬೇಕು, ನಾಡಸೇವೆ ಮಾಡಬೇಕು ಎನ್ನುವ ಕನಸು ಹೊತ್ತ ಯುವ ಪಡೆಯು ರಾಯಚೂರ ಸಿಟಿಯತ್ತ ತಂಡೋಪತಂಡವಾಗಿ ಆಗಮಿಸುವ ದೃಶ್ಯಗಳು ಕಾಣಿಸುತ್ತಿವೆ.

ಟಿಕೇಟ್ ಪ್ರಯಾಣ ದರ ನಿಗದಿ: ಆಗಸ್ಟ್ 8ರಿಂದ ಆಗಸ್ಟ್ 26ರವರೆಗೆ ವಿವಿಧ ಜಿಲ್ಲೆಗಳಿಂದ ಆಗಮಿಸುವ ಸೇನಾ ರ್‍ಯಾಲಿಯ ಅಭ್ಯರ್ಥಿಗಳಿಗೆ ಅನುಕೂಲವಾಗಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಹೆಚ್ಚುವರಿ ಸಾರಿಗೆ ಕಾರ್ಯಚರಣೆಗೆ ಕ್ರಮ ವಹಿಸಿದೆ. ಜೊತೆಗೆ ಟಿಕೆಟ್ ಪ್ರಯಾಣ ದರವನ್ನು ಸಹ ಸಾರಿಗೆ ಇಲಾಖೆಯು ನಿಗದಿಪಡಿಸಿದೆ. ವಾಲ್ಮೀಕಿ ಭವನ ರಾಜಮಾತಾ ದೇವಸ್ಥಾನ, ಬಂಜಾರ ಭವನ ಯರಗೇರಾ ರಸ್ತೆ, ಸಿದ್ರಾಂಪುರದ ಡಿಗ್ರಿ ಕಾಲೇಜ್ ನಿಂದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣಕ್ಕೆ ತೆರಳಲು ತಲಾ 20 ರೂ. ಟಿಕೇಟ್ ದರ ಹಾಗೂ ಗಾಂಧಿ ವೃತ್ತದ ಸಂತೋಷ ಹಬ್, ರೈಲ್ವೆ ನಿಲ್ದಾಣ ಮತ್ತು ರಾಯಚೂರ ಕೇಂದ್ರ ಬಸ್ ನಿಲ್ದಾಣದಿಂದ ಲಿಂಗಸೂರ ರಸ್ತೆಯಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ತೆರಳಲು ತಲಾ 15 ರೂ. ಟಿಕೇಟ್ ದರ ನಿಗದಿಪಡಿಸಲಾಗಿದೆ ಎಂದು ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಪ್ರತಿಕ್ರಿಯೆ:

ಸೇನೆಯಲ್ಲಿ ಎಲ್ಲ ವಿಭಾಗಗಳ ಆಯ್ಕೆಯಾಗಿ ಸೇನಾ ನೇಮಕಾತಿ ರ್‍ಯಾಲಿಯನ್ನು ನಡೆಸಲಾಗುತ್ತದೆ. ಈ ಸೇನಾ ಭರ್ತಿಯು ರಾಯಚೂರು ಜಿಲ್ಲೆಯಲ್ಲಿ ನಡೆಯುತ್ತಿರುವುದು ವಿಶೇಷ. ಈ ರ್‍ಯಾಲಿಯಲ್ಲಿ ಬೇರೆ ಬೇರೆ ಜಿಲ್ಲೆಗಳ ಅಭ್ಯರ್ಥಿಗಳು ಭಾಗಿಯಾಗಲಿದ್ದು, ರ್‍ಯಾಲಿಯು ಶಿಸ್ತಿನಿಂದ ನಡೆದಲ್ಲಿ ನಮ್ಮ ಜಿಲ್ಲೆಗೆ ಹೆಸರು ಬರಲಿದೆ. ರಾಯಚೂರ ಜಿಲ್ಲೆಯ ಸಾರ್ವಜನಿಕರು ಈ ಸೇನಾ ನೇಮಕಾತಿ ರ್‍ಯಾಲಿಗೆ ಸಹಕರಿಸಬೇಕು. ಈ ಭಾಗದ ವಿದ್ಯಾರ್ಥಿ–ಯುವಜನರು ಈ ರ್‍ಯಾಲಿಯಿಂದಾಗಿ ಸೇನೆ ಸೇರುವ ಸ್ಫೂರ್ತಿ ಹೊಂದಬೇಕು.


– ಕೆ ನಿತೀಶ್, ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು

## ಗುಂಪು ಘರ್ಷಣೆ: ವರದಿ ನೀಡಲು ಸೂಚನೆ

**ಬೆಂಗಳೂರು, ಆ. 7–** ಧರ್ಮಸ್ಥಳದಲ್ಲಿ ನಿನ್ನೆ ನಡೆದ ಗುಂಪು ಘರ್ಷಣೆ ಸಂಬಂಧ ವರದಿ ನೀಡುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ಸೂಚನೆ ನೀಡಿದ್ದೇನೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳದಲ್ಲಿ ನಿನ್ನೆ ಎರಡು ಗುಂಪುಗಳ ನಡುವೆ ಘರ್ಷಣೆಯಾಗಿರುವ ಮಾಹಿತಿ ಗೊತ್ತಾಗಿದೆ. ಈ ಘರ್ಷಣೆಗೆ ಕಾರಣ ಏನು, ಏಕೆ ಘರ್ಷಣೆಯಾಗಿದೆ, ಘರ್ಷಣೆಯ ಉದ್ದೇಶ ಏನು ಎಂಬ ಬಗ್ಗೆ ವರದಿ ನೀಡಲು ಪೊಲೀಸರಿಗೆ ಸೂಚಿಸಿದ್ದೇನೆ ಎಂದು ತಿಳಿಸಿದರು.

ಧರ್ಮಸ್ಥಳದಲ್ಲಿ ನಿನ್ನೆ ನಡೆದ ಗುಂಪು ಘರ್ಷಣೆಗೆ ಸಂಬಂಧಿಸಿದಂತೆ ಎರಡು ಗುಂಪಿನವರು ದೂರು ಕೊಟ್ಟಿದ್ದಾರೆ. ಪೊಲೀಸರು ಕ್ರಮ ಕೈಗೊಳ್ಳುತ್ತಾರೆ ಎಂದು ಹೇಳಿದರು.ಧರ್ಮಸ್ಥಳದಲ್ಲಿ ಶವಗಳನ್ನು ಹೂತಿರುವ ಪ್ರಕರಣದಲ್ಲಿ ಸರ್ಕಾರ ಯಾವುದೇ ಹಸ್ತಕ್ಷೇಪ ಮಾಡಿಲ್ಲ, ಮಾಡುವುದೂ ಇಲ್ಲ. ಎಸ್‌ಐಟಿ ರಚನೆ ಮಾಡಿದ್ದೇವೆ, ತನಿಖೆ ನಡೆದಿದೆ ಎಂದರು.ವ್ಯಕ್ತಿಯೊಬ್ಬರ ಧರ್ಮಸ್ಥಳದ ಸುತ್ತ ಅನೇಕ ಶವ ಹೂತಿದ್ದೇನೆ ಎಂಬ ಮಾಹಿತಿ ನೀಡಿದ್ದ. ಅದರಂತೆ ಸುಮಾರು 13 ಸ್ಥಳಗಳಲ್ಲಿ ಉತ್ಖನನ ಕಾರ್ಯ ನಡೆದಿದೆ. 6ನೇ ಜಾಗದಲ್ಲಿ ಪುರುಷನ ಅಸ್ಥಿಪಂಜರ ಸಿಕ್ಕಿದೆ. ಬೇರೆ ಬೇರೆ ಕಡೆಯೂ ಮೂಳೆಗಳು ಸಿಕ್ಕಿವೆ. ಇದನ್ನೆಲ್ಲಾ ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿದೆ. ಎಸ್‌ಐಟಿ ತನಿಖೆಯಿಂದ ಎಲ್ಲ ಸತ್ಯಗಳು ಹೊರಬರುತ್ತದೆ ಎಂದರು.

## ವಿಜಯ್ ದೇವರಕೊಂಡ ಕಿಂಗ್‌ಡಮ್ ಚಿತ್ರದ ವಿವಾದ



**ಹೈದರಾಬಾದ್,ಆ.7–**ದಕ್ಷಿಣ ಭಾರತದ ಸೂಪರ್‌ಸ್ಟಾರ್ ವಿಜಯ್ ದೇವರಕೊಂಡ ಅವರ ಕಿಂಗ್‌ಡಮ್ ಚಿತ್ರ ಜುಲೈ 31 ರಂದು ಬಿಡುಗಡೆಯಾಗಿದೆ. ಅಂದಿನಿಂದ, ಈ ಚಿತ್ರವು ವಿವಾದಗಳಿಂದ ಸುತ್ತುವರೆದಿದೆ. ಈ ಚಿತ್ರವು ತಮಿಳು ಗುರುತನ್ನು ತಪ್ಪಾಗಿ ಪ್ರತಿನಿಧಿಸುತ್ತದೆ ಮತ್ತು ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡುತ್ತದೆ ಎಂಬ ಆರೋಪವಿದೆ.

ತಮಿಳು ರಾಷ್ಟ್ರೀಯತಾವಾದಿ ಗುಂಪು ತಮಿಳರ್ ಕಚ್ಚಿ (ಎನ್‌ಟಿಕೆ) ಚಿತ್ರದ ಕೆಲವು ಭಾಗಗಳಿಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಚಿತ್ರದ ಮೇಲೆ ನಿಷೇಧ ಹೇರಬೇಕೆಂದು ಒತ್ತಾಯಿಸಿದೆ. ಶ್ರೀಲಂಕಾದ ತಮಿಳರನ್ನು ರಾಜ್ಯದಲ್ಲಿ ನಕಾರಾತ್ಮಕವಾಗಿ ತೋರಿಸಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಇದಲ್ಲದೆ, ಚಿತ್ರದಲ್ಲಿನ ಖಳನಾಯಕನ ಹೆಸರು ಮುರುಗನ್ ಇದು ತಮಿಳುನಾಡಿನ ಅತ್ಯಂತ ಪೂಜ್ಯ ದೇವರುಗಳಲ್ಲಿ ಒಬ್ಬರಾದ ಮುರುಗನ್ ದೇವರಿಗೆ ಸಂಬಂಧಿಸಿದ ಹೆಸರು. ಇದರಿಂದಾಗಿಯೂ ಜನರು ಅಸಮಾಧಾನ ಮತ್ತು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಚಿತ್ರವು ತಮಿಳರ ಗುರುತು ಮತ್ತು ಸಾಂಸ್ಕೃತಿಕ ಇತಿಹಾಸವನ್ನು ಕೆಣಕುತ್ತದೆ ಎಂದು ಎನ್‌ಟಿಕೆ ಹೇಳುತ್ತದೆ. ಈ ಕಾರಣದಿಂದಾಗಿ, ರಾಜ್ಯಾದ್ಯಂತ ಅನೇಕ ಚಿತ್ರಮಂದಿರಗಳ ಹೊರಗೆ ಪ್ರತಿಭಟನೆಗಳು ನಡೆದವು. ಗಲಾಟೆ ಹೆಚ್ಚಾಗುತ್ತಿರುವುದನ್ನು ಗಮನಿಸಿದ ಪೊಲೀಸರು ಸಹ ಸ್ಥಳಕ್ಕೆ ತಲುಪಿದರು. ಪರಿಸ್ಥಿತಿಯನ್ನು ನಿಯಂತ್ರಿಸಲು ಹೆಚ್ಚುವರಿ ಪೊಲೀಸ್ ಪಡೆಗಳನ್ನು ನಿಯೋಜಿಸಲಾಗಿದೆ.

ಎನ್‌ಟಿಕೆ ಈ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೂಡಲೇ ಕೈಗೊಳ್ಳಬೇಕೆಂದು ಒತ್ತಾಯಿಸಿದೆ ಮತ್ತು ಚಿತ್ರವನ್ನು ನಿಷೇಧಿಸುವಂತೆ ತಮಿಳುನಾಡು ಆಡಳಿತದ ಮೇಲೆ ಒತ್ತಡ ಹೇರಿದೆ.

ಕಿಂಗ್‌ಡಮ್ ಚಿತ್ರ ಜುಲೈ 31 ರಂದು ಬಿಡುಗಡೆಯಾಯಿತು. ವಿಜಯ್ ದೇವರಕೊಂಡ ಜೊತೆಗೆ, ಭಾಗ್ಯಶ್ರೀ ಮತ್ತು ಸತ್ಯದೇವ್ ಕೂಡ ಚಿತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

## ಅಂಟಿಬಿಯೋಟಿಕ್ಸ್ ಬಳಕೆ ವಿರುದ್ಧ ವಿಶ್ವ ಆರೋಗ್ಯ ಸಂಸ್ಥೆ ಸಲಹೆ

**ನವದೆಹಲಿ, ಆ. 7–** ತೀವ್ರವಾದ ಕೋವಿಡ್ ರೋಗಿಗಳಲ್ಲಿ ಬ್ಯಾಕ್ಟೀರಿಯಾದ ಸೋಂಕು ಶಂಕಿತವಾಗಿಲ್ಲದಿದ್ದಾಗಲೂ, ಪ್ರತಿಜೀವಕಗಳ ಬಳಕೆಯ ವಿರುದ್ಧ ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯುಎಚ್‌ಒ) ಸಲಹೆ ನೀಡಿದೆ.ಜಾಗತಿಕ ಆರೋಗ್ಯ ಸಂಸ್ಥೆಯು ಕೋವಿಡ್ ಪೀಡಿತ ಜನರ ವೈದ್ಯಕೀಯ ನಿರ್ವಹಣೆಗಾಗಿ ನವೀಕರಿಸಿದ ಶಿಫಾರಸುಗಳನ್ನು ಬಿಡುಗಡೆ ಮಾಡಿದೆ, ಇದು ವೈರಸ್‌ಗೆ ಪ್ರತಿಜೀವಕಗಳನ್ನು ಪಡೆದ ರೋಗಿಗಳ ಫಲಿತಾಂಶಗಳ ಇತ್ತೀಚಿನ ಮೆಟಾ–ವಿಶ್ಲೇಷಣೆಯಿಂದ ಉತ್ಪತ್ತಿಯಾದ ಪುರಾವೆಗಳನ್ನು ಆಧರಿಸಿದೆ ಎಂದು ಅದು ಹೇಳಿದೆ.

ತೀವ್ರವಲ್ಲದ ಕೋವಿಡ್–19 ಮತ್ತು ಏಕಕಾಲೀನ ಬ್ಯಾಕ್ಟೀರಿಯಾದ ಸೋಂಕಿನ ಕಡಿಮೆ ಕ್ಲಿನಿಕಲ್ ಅನುಮಾನ ಹೊಂದಿರುವ ರೋಗಿಗಳಿಗೆ, ನಾವು ಪ್ರಾಯೋಗಿಕ ಪ್ರತಿಜೀವಕಗಳನ್ನು ಶಿಫಾರಸು ಮಾಡುವುದಿಲ್ಲ. ತೀವ್ರವಾದ ಕೋವಿಡ್–19 ಮತ್ತು ಏಕಕಾಲೀನ ಬ್ಯಾಕ್ಟೀರಿಯಾದ ಸೋಂಕಿನ ಕಡಿಮೆ ಕ್ಲಿನಿಕಲ್ ಅನುಮಾನ ಹೊಂದಿರುವ ರೋಗಿಗಳಿಗೆ, ನಾವು ಪ್ರಾಂಯೋಗಿಕ ಪ್ರತಿಜೀವಕಗಳನ್ನು ಸೂಚಿಸುವುದಿಲ್ಲ ಎಂದು ಡಬ್ಲ್ಯುಎಚ್‌ಒ ಹೇಳಿದೆ.

ಕೋವಿಡ್–19 ಸಾಂಕ್ರಾಮಿಕ ರೋಗಶಾಸ್ತ್ರ ಮತ್ತು ತೀವ್ರತೆ ಬದಲಾಗಿರುವುದರಿಂದ ಮತ್ತು ತುರ್ತು ಕ್ರಮಗಳು ಕಡಿಮೆಯಾಗಿರುವುದರಿಂದ, ಹಲವಾರು ಶಿಫಾರಸುಗಳ ಹಿಂದಿನ ಪುರಾವೆಗಳು ಬದಲಾಗಿವೆ ಎಂದು ಡಬ್ಲ್ಯುಎಚ್‌ಒ ಹೇಳಿದೆ.ಸಮಾನಾಂತರವಾಗಿ, ಆರೋಗ್ಯ ವ್ಯವಸ್ಥೆಗಳು ಮತ್ತು ಜಾಗತಿಕ ಪರಿಸರದ ವಿಕಸನವು 2020 ಕ್ಕೆ ಹೋಲಿಸಿದರೆ 2024 ರಲ್ಲಿ ಶಿಫಾರಸುಗಳನ್ನು ಸಂಪೂರ್ಣವಾಗಿ ವಿಭಿನ್ನ ಸಂದರ್ಭದಲ್ಲಿ ಜಾರಿಗೆ ತಂದಿದೆ.

ಈ ಮಾರ್ಗಸೂಚಿಗಳು 2020 ರಲ್ಲಿ ಮೊದಲ ಆವೃತ್ತಿಯಿಂದ ಹೊಸ ಮಾಹಿತಿ ಮತ್ತು ಸಾಂಕ್ರಾಮಿಕ ರೋಗದ ಬದಲಾಗುತ್ತಿರುವ ಸಂದರ್ಭಗಳಿಗೆ ಅನುಗುಣವಾಗಿ ವಿಕಸನಗೊಂಡಿವೆ ಎಂದು ಹೇಳಿದೆ.ಈ ಸಮಯದಲ್ಲಿ ಕೋವಿಡ್–19 ಕಾಯಿಲೆಗೆ ಗಮನಾರ್ಹ ಬದಲಾವಣೆಗಳು ಒಟ್ಟಾರೆಯಾಗಿ ಸೋಂಕಿನ ಪ್ರಮಾಣವನ್ನು ಕಡಿಮೆ ಮಾಡಿವೆ ಮತ್ತು ರೋಗದ ತೀವ್ರತೆಯನ್ನು ಕಡಿಮೆ ಮಾಡಿವೆ. ವಿಧಿಸಲಾಗಿದ್ದ ತುರ್ತು ಕ್ರಮಗಳನ್ನು ಸಹ ತೆಗೆದುಹಾಕಲಾಗಿದೆ ಮತ್ತು ಕೋವಿಡ್–19 ರೋಗಿಗಳಿಗೆ ಆರೈಕೆ ಸಾಮಾನ್ಯ ಆರೋಗ್ಯ ವ್ಯವಸ್ಥೆಗಳೊಂದಿಗೆ ಹೆಚ್ಚು ಸಂಯೋಜಿಸಲ್ಪಟ್ಟಿದೆ.

ಈ ವಿಭಿನ್ನ ವಾತಾವರಣವು ಅಸ್ತಿತ್ವದಲ್ಲಿರುವ ಎಲ್ಲಾ ಮಾರ್ಗದರ್ಶನಗಳ ವ್ಯಾಪ್ತಿ ಮತ್ತು ವಿಷಯದ ವಿಮರ್ಶೆಯನ್ನು ಪ್ರೆ?ರೇಪಿಸಿದೆ. ಸ್ಪಷ್ಟ ಗಮನ ಮತ್ತು ಪ್ರಸ್ತುತತೆಯನ್ನು ಕಾಪಾಡಿಕೊಳ್ಳಲು, ಸಾಮಾನ್ಯ ವೈದ್ಯಕೀಯ ತತ್ವಗಳೆಂದು ಪರಿಗಣಿಸಲಾಗುವ ಶಿಫಾರಸುಗಳನ್ನು ಮತ್ತು ಕೋವಿಡ್–19 ನಿರ್ವಹಣೆಗೆ ಇನ್ನು ಮುಂದೆ ನಿರ್ದಿಷ್ಟವಾಗಿಲ್ಲದ ಶಿಫಾರಸುಗಳನ್ನು ನಾವು ತೆಗೆದುಹಾಕಿದ್ದೇವೆ ಎಂದು ಹೇಳಿದೆ.ಂಟಿಬಯಾಟಿಕ್‌ಗಳ ಬಳಕೆಯ ಕುರಿತಾದ ಹೊಸ ಶಿಫಾರಸುಗಳು ವ್ಯವಸ್ಥಿತ ವಿಮರ್ಶೆ ಮತ್ತು ಮೆಟಾ–ವಿಶ್ಲೇಷಣೆಯಿಂದ ದತ್ತಾಂಶದ ಪ್ರಕಟಣೆ ಮತ್ತು ಆಂಟಿಮೈಕ್ರೊಬಿಯಲ್ ಪ್ರತಿರೋಧವನ್ನು ಪರಿಹರಿಸುವ ತುರ್ತು ಅಗತ್ಯದಿಂದ ಪ್ರೇರೇಪಿಸಲ್ಪಟ್ಟವು.ನವೀಕರಿಸಿದ ಮಾರ್ಗಸೂಚಿಗಳು ಕೋವಿಡ್ ಮತ್ತು ಕೋವಿಡ್–19 ನಂತರದ ರೋಗಿಗಳ ಆರೋಗ್ಯ ಆರೈಕೆಯಲ್ಲಿ ನೇರವಾಗಿ ಅಥವಾ ಪರೋಕ್ಷವಾಗಿ ತೊಡಗಿಸಿಕೊಂಡಿರುವ ಜನರಿಗೆ ಎಂದು ಹೇಳಿದೆ.

ಇದರಲ್ಲಿ ವೈದ್ಯರು, ಮಿತ್ರ ಆರೋಗ್ಯ ರಕ್ಷಣಾ ಕಾರ್ಯಕರ್ತರು, ಸೌಲಭ್ಯ ವ್ಯವಸ್ಥಾಪಕರು ಮತ್ತು ಆಸ್ಪತ್ರೆ ನಿರ್ವಾಹಕರು ಸೇರಿದ್ದಾರೆ. ಪ್ರತಿದಿನ ಹಲವಾರು ಸಾವಿರ ಜನರಿಗೆ ಸೋಂಕು ತಗುಲುತ್ತಲೇ ಇದೆ, ಇದು ಪ್ರಪಂಚದಾದ್ಯಂತ ತಡೆಗಟ್ಟಬಹುದಾದ ಅನಾರೋಗ್ಯ ಮತ್ತು ಮರಣಕ್ಕೆ ಕಾರಣವಾಗುತ್ತದೆ ಎಂದು ಹೇಳಿದೆ. ಕೋವಿಡ್–19 ಗಾಗಿ ಲಸಿಕೆಗಳು ಮತ್ತು ಚಿಕಿತ್ಸೆಯ ಹೊರಹೊಮ್ಮುವಿಕೆ ಮತ್ತು ಸೋಂಕಿನಿಂದ ಜನಸಂಖ್ಯೆಯ ಪ್ರತಿರಕ್ಷೆಯನ್ನು ಹೆಚ್ಚಿಸುವುದರಿಂದ ಆಸ್ಪತ್ರೆಗೆ ದಾಖಲು, ರೋಗದ ತೀವ್ರತೆ ಮತ್ತು ಮರಣ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ.

ಆದಾಗ್ಯೂ, ವೈರಸ್ ಸೋಂಕು, ರೋಗನಿರೋಧಕ ಶಕ್ತಿ ತಪ್ಪಿಸಿಕೊಳ್ಳುವಿಕೆ ಮತ್ತು ರೋಗದ ತೀವ್ರತೆಯ ವಿಷಯದಲ್ಲಿ ವಿಕಸನಗೊಳ್ಳುತ್ತಲೇ ಇದೆ. ಈ ಮಾರ್ಗಸೂಚಿಯು ಬದಲಾಗುತ್ತಿರುವ ಭೂದೃಶ್ಯ ಮತ್ತು ಪುರಾವೆಗಳ ಲಭ್ಯತೆ ಮತ್ತು ಕೋವಿಡ್–19 ಗಾಗಿ ಚಿಕಿತ್ಸೆ ಮತ್ತು ನಿರ್ವಹಣಾ ತಂತ್ರಗಳ ನಿರಂತರ ಅಭಿವೃದ್ಧಿಯನ್ನು ದೃಢವಾಗಿ ಮತ್ತು ಪಾರದರ್ಶಕವಾಗಿ ತಿಳಿಸುತ್ತದೆ ಎಂದು ಹೇಳಿದೆ.

## ಆಂಜನಾದ್ರಿಗೆ ಭೇಟಿ ನೀಡಿದ ರಾಜ್ಯಪಾಲ ಗೆಹ್ಲೋಟ



**ಗಂಗಾವತಿ,ಆ.07–** ಅಂಜನಾದ್ರಿ ಬೆಟ್ಟಕ್ಕೆ ನಿನ್ನೆ ರಾಜ್ಯಪಾಲ ತಾವರ ಚಂದ್ ಗೆಹ್ಲೋಟ ತಮ್ಮ ಕುಟುಂಬ ಸಮೇತವಾಗಿ 548 ಮೆಟ್ಟಿಲುಗಳನ್ನು ಹತ್ತುವುದರ ಮೂಲಕ ಆಂಜನೇಯ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಪ್ರಧಾನ ಅರ್ಚಕ ವಿದ್ಯಾ ದಾಸ ಬಾಬಾಜಿ ಅವರು ತುಳಸಿದಾಸರ ಹನುಮಾನ್ ಚಾಲೀಸ್ ಪಾರಾಯಣವನ್ನು ಅತ್ಯಂತ ಶ್ರದ್ಧೆ ಭಕ್ತಿಯಿಂದ ನೆರವೇರಿಸಿ ಕೊಟ್ಟರು. ಜೊತೆಗೆ ಕಿಷ್ಕಿಂದ ಅಂಜನಾದ್ರಿ ಪರ್ವತ ಹಾಗೂ ಆಂಜನೇಯ ಕ್ಷೇತ್ರದ ಮಹತ್ವದ ಬಗ್ಗೆ ಮನವರಿಕೆ ಮಾಡಿದರು.ಶ್ರೀ ಕ್ಷೇತ್ರಕ್ಕೆ ಬರುವ ಆಗಮಿಸುವ ಭಕ್ತಾದಿಗಳಿಗೆ ಮೂಲಭೂತ ಸೌಲಭ್ಯ ಹಾಗೂ ವ್ಯಕ್ತಿ ಧರ್ಮ ಮಾರ್ಗದಲ್ಲಿ ಮುನ್ನಡೆಸಿಕೊಂಡು ಬರಲು ಸಂಸ್ಕೃತ ಪಾಠ ಶಾಲೆಯ ಪ್ರಾರಂಭ ಕುರಿತು ಮನವಿ ಮಾಡಿದರು. ಈ ಸಂದರ್ಭದಲ್ಲಿ ರಾಜ್ಯಪಾಲರು ಸುಪ್ರೀಂ ಕೋರ್ಟ್ ವಿಷಯದ ಕುರಿತು ವಿದ್ಯಾದಾಸ್ ಬಾಬಾ ರೊಂದಿಗೆ ಚರ್ಚಿಸಿದರು. ವೇದ ಪಾಠಶಾಲೆ ಆದಷ್ಟು ಬೇಗನೆ ಪ್ರಾರಂಭಿಸಲು ಸೂಚನೆ ನೀಡುತ್ತೇನೆ ಎಂದು ಹೇಳಿದರು.

## ಸಾಲಬಾಧೆ ತಾಳದೆ ರೈತ ಆತ್ಮಹತ್ಯೆ

**ಕಲಬುರಗಿ,ಆ.7–**ಸಾಲಬಾಧೆ ತಾಳದೆ ರೈತ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕಾಳಗಿ ತಾಲ್ಲೂಕಿನ ರಟಕಲ್ ಗ್ರಾಮದಲ್ಲಿ ನಡೆದಿದೆ.

ನಾಗಣ್ಣ ತಂದೆ ಚಂದ್ರಶೆಟ್ಟಿ (58) ಆತ್ಮಹತ್ಯೆ ಮಾಡಿಕೊಂಡ ರೈತ. ಕೃಷ್ಣ ಗ್ರಾಮೀಣ ಬ್ಯಾಂಕ್‌ನಲ್ಲಿ 1 ಲಕ್ಷ, ಖಾಸಗಿಯಾಗಿ 7 ಲಕ್ಷ ಸಾಲವಾಗಿತ್ತು ಎಂದು ತಿಳಿದುಬಂದಿದೆ. ಮೃತ ರೈತನಿಗೆ ಪತ್ನಿ, ಇಬ್ಬರು ಪುತ್ರರು ಮತ್ತು ಇಬ್ಬರು ಪುತ್ರಿಯರು ಇದ್ದಾರೆ. ಹೊಲದಲ್ಲಿ ತೊಗರಿ ಬಿತ್ತನೆ ಮಾಡಲಾಗಿತ್ತು ಎಂದು ತಿಳಿದುಬಂದಿದೆ.

ಸಾಲಬಾಧೆ ತಾಳದೆ ತನ್ನ ಹೊಲದಲ್ಲಿರುವ ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದು, ಈ ಬಗ್ಗೆ ರಟಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ತನಿಖೆ ನಡೆದಿದೆ.



ಯುವ ಮಾರ್ಗ



## ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನಾ ಆದ್ಯತೆ ನೀಡಿ– ಫಾ. ಜಾರ್ಜ ಪಿಂಟೋ ಎಸ್.ಜೆ.



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.07**–ತಾಲೂಕಿನ ಭಂಗಿನಾಯಕನ ತಾಂಡ ಹಾಗೂ ಮುರಾಹನಪುರ ತಾಂಡ ಗ್ರಾಮದಲ್ಲಿ ಶಾಲಾ ಆವರಣ ಸ್ವಚ್ಚತೆ ಜೊತೆಗೆ ಊರಿನ ಸಾರ್ವಜನಿಕ ಸ್ಥಳದಲ್ಲಿ ಹೆಣ್ಣು ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಪರಿಸರ ಕುರಿತು ಜಾಗೃತಿ ಕಾರ್ಯಕ್ರಮವನ್ನು ಸಂತ ಜೋಸೆಫರ ವಿಶ್ವ ವಿದ್ಯಾಲಯ ಬೆಂಗಳೂರು ಹಾಗೂ ಊರಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಗ್ರಾಮ ಪಂಚಾಯತ್ ಮತ್ತು ಲೊಯೋಲ ಸಮಾಜ ಸೇವಾ ಕೇಂದ್ರ, ಮಾನ್ವಿ ವತಿಯಿಂದ ಹಮ್ಮಿಕೊಳ್ಳಲಾಗಿತ್ತು.

ಲೊಯೋಲ ಸಮಾಜ ಸೇವಾ ಕೇಂದ್ರದ ಸಹಾಯಕ ನಿರ್ದೇಶಕರಾದ ಫಾ. ಜಾರ್ಜ ಪಿಂಟೋ ಎಸ್.ಜೆ. ಮಾತನಾಡಿ ಇಂದಿನ ದಿನಮಾನಗಳಲ್ಲಿ ನಮ್ಮ ರಾಯಚೂರು ಭಾಗದಲ್ಲಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡುತ್ತಿಲ್ಲ ಜೊತೆಗೆ ನಮ್ಮ ಸುತ್ತಮುತ್ತಲ ಪರಿಸರ ಹಾಗೂ ನಮ್ಮ ಆರೋಗ್ಯದ ಕಡೆ ಕೂಡಾ ಕಾಳಜಿ ವಹಿಸುವಂತೆ ತಿಳಿಸಿದರು.

ಬೆಂಗಳೂರಿನಿಂದ ಔಟ್ರೀಚ್ ಕ್ಯಾಂಪ್‌ಗಾಗಿ ಆಗಮಿಸಿದ್ದ ವಿದ್ಯಾರ್ಥಿಗಳು ಸತತ ಎರಡು ದಿನಗಳ ಕಾಲ ಹಳ್ಳಿಯಲ್ಲಿ ಇದ್ದು ಸರ್ಕಾರಿ ಶಾಲೆಗೆ ಭೇಟಿ ಮಾಡಿ ಮಕ್ಕಳೊಂದಿಗೆ ಕಲಿಕಾ ಚಟುವಟಿಕೆಗಳನ್ನು ನಡೆಸಿಕೊಟ್ಟರು ಹಾಗೂ ಆಟೋಟಗಳನ್ನು ನಡೆಸಿದರು. ಶಾಲಾ ಆವರಣದಲ್ಲಿ ಸಸಿಗಳನ್ನು ನೇಡಲಾಯಿತು ಈ ಮೂಲಕ ಪರಿಸರದ ಮಹತ್ವವನ್ನು ಮಕ್ಕಳಿಗೆ ತಿಳಿಸಲಾಯಿತು. ನಂತರ ದಿನ ಸ್ವ–ಸಹಾಯ ಸಂಘದ ಸದಸ್ಯರ ಜೊತೆ ಅವರ ಹೊಲಗಳಿಗೆ ತೆರಳಿ ಅವರೊಂದಿಗೆ ಹೊಲದಲ್ಲಿ ಸಣ್ಣಪುಟ್ಟ ಕೆಲಸಗಳನ್ನು ಮಾಡುತ್ತಾ ಅವರ ಕೃಷಿ ಚಟುವಟಿಕೆಗಳ ಕುರಿತು ಮಾಹಿತಿ ತಿಳಿದುಕೊಂಡರು. ಕೊನೆಯಲ್ಲಿ ಊರಿನ ಸಾರ್ವಜನಿಕ ಸ್ಥಳದಲ್ಲಿ ಹೆಣ್ಣು ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಪರಿಸರ ಕುರಿತು ಜಾಗೃತಿ ಕಾರ್ಯಕ್ರಮವನ್ನು ನಡೆಸಿಕೊಟ್ಟರು.

ಈ ಕಾರ್ಯಕ್ರಮದಲ್ಲಿ ಲೊಯೋಲ ಸಮಾಜ ಸೇವಾ ಸಂಸ್ಥೆಯ ಸಹಾಯಕ ನಿರ್ದೇಶಕರು, ಸಿಬ್ಬಂಧಿಗಳು, ಊರಿನ ಸ್ವ–ಸಹಾಯ ಸಂಘದ ಸದಸ್ಯರು, ಮಹಿಳೆಯರು ಮಕ್ಕಳು ಮತ್ತು ಯುವಕರು ಜೊತೆಗೆ ಬೆಂಗಳೂರಿನ ಸಂತ ಜೋಸೇಫರ್ ವಿಶ್ವ ವಿದ್ಯಾಲಯದ ಸಿಬ್ಬಂಧಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು

## ಭಾರತೀಯ ಸಾಂಸ್ಕೃತಿಕ ಪುನರುಜ್ಜೀವನದಲ್ಲಿ ಟ್ಯಾಗೋರ್ ಪಾತ್ರ ಪ್ರಮುಖ



**ಕಲಬುರಗಿ,ಆ.07**–ರವೀಂದ್ರನಾಥ ಟಾಗೋರ್ ಅವರು ಭಾರತೀಯ ಸಾಂಸ್ಕೃತಿಕ ಪುನರುಜ್ಜೀವನದಲ್ಲಿ ಪ್ರಮುಖ ಪಾತ್ರ ವಹಿಸಿದರು. ರಾಷ್ಟಗೀತೆ ರಚನೆ ದೇಶಕ್ಕೆ ಪ್ರಥಮ ನೊಬೆಲ್ ದೊರಕಿಸಿಕೊಡುವ ಮೂಲಕ ಜನಮಾನಸದಲ್ಲಿ ಉಳಿದಿದ್ದಾರೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು.

ನಗರದ ಖಾದ್ರಿ ಚೌಕ್ ಸಮೀಪದ ಸಕ್ಸಸ್ ಕಂಪ್ಯೂಟರ್ ತರಬೇತಿ ಕೇಂದ್ರದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ ರವೀಂದ್ರನಾಥ ಠಾಗೋರ್ ರವರ 84ನೇ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಟ್ಯಾಗೋರ್ ಬಂಗಾಳಿ ಕವಿ, ಬರಹಗಾರ, ನಾಟಕಕಾರ ಮತ್ತು ಕಲಾವಿದರಾಗಿದ್ದರು. ಅವರು ಭಾರತದ ಅತ್ಯಂತ ಪ್ರಸಿದ್ಧ ಸಾಹಿತಿಗಳಲ್ಲಿ ಒಬ್ಬರು ಮತ್ತು 1913 ರಲ್ಲಿ ಸಾಹಿತ್ಯದಲ್ಲಿ ನೊಬೆಲ್ ಪ್ರಶಸ್ತಿಯನ್ನು ಪಡೆದವರು. ತಮ್ಮ ಸಾಹಿತ್ಯ, ಸಂಗೀತ ಮತ್ತು ಕಲೆಗಳ ಮೂಲಕ ಭಾರತೀಯ ಸಂಸ್ಕೃತಿಯನ್ನು ಜಗತ್ತಿಗೆ ಪರಿಚಯಿಸಿದರು. ಅವರ ಕೃತಿಗಳು ಪ್ರಪಂಚದಾದ್ಯಂತ ಹೆಚ್ಚು ಓದಲ್ಪಡುತ್ತವೆ ಮತ್ತು ಪ್ರೀತಿ, ಶಾಂತಿ, ಮತ್ತು ಮಾನವೀಯತೆಯ ಸಂದೇಶಗಳನ್ನು ಸಾರುತ್ತವೆ ಎಂದರು.

ಟ್ಯಾಗೋರ್ ಅವರ ಪ್ರಮುಖ ಕೃತಿಗಳಲ್ಲಿ "ಗೀತಾಂಜಲಿ", "ಗೋರಾ", "ಚೆಹಾರಾ", "ಕಬೂಲಿವಾಲಾ", ಮತ್ತು "ರಕ್ತಕರವಿ" ಸೇರಿವೆ. ಅವರು ಬಂಗಾಳಿ ಸಾಹಿತ್ಯ ಮತ್ತು ಸಂಗೀತಕ್ಕೆ ಹೊಸ ರೂಪಗಳನ್ನು ನೀಡಿದರು ಮತ್ತು ಭಾರತೀಯ ಸಂಸ್ಕೃತಿಯನ್ನು ಪಶ್ಚಿಮಕ್ಕೆ ಪರಿಚಯಿಸಲು ಶ್ರಮಿಸಿದ್ದಾರೆ. ಬಂಗಾಳಿ ಭಾಷೆಯಲ್ಲಿ ಅನೇಕ ಕವನಗಳು, ಕಥೆಗಳು, ನಾಟಕಗಳು, ಮತ್ತು ಕಾದಂಬರಿಗಳನ್ನು ಬರೆದಿದ್ದಾರೆ. ಅವರ ಕೃತಿಗಳು ಭಾವಗೀತಾತ್ಮಕ, ಲಯಬದ್ಧ, ಮತ್ತು ಮಾನವೀಯತೆಯ ಬಗ್ಗೆ ಆಶಾವಾದವನ್ನು ಹೊಂದಿವೆ. ಅವರು ಭಾರತದ ರಾಷ್ಟಗೀತೆ "ಜನ ಗಣ ಮನ" ಮತ್ತು ಬಾಂಗ್ಲಾದೇಶದ ರಾಷ್ಟಗೀತೆ "ಅಮರ್ ಶೋನಾರ್ ಬಾಂಗ್ಲಾ"ದ ಲೇಖಕರಾಗಿದ್ದಾರೆ ಎಂದು ನುಡಿದರು. ಕಾರ್ಯಕ್ರಮದಲ್ಲಿ ಅಸ್ಲಾಂ ಶೇಖ್, ಶಿವಯೋಗೆಪ್ಪಾ ಎಸ್. ಬಿರಾದಾರ, ಸಂಸ್ಥೆಯ ಸಿಬ್ಬಂದಿ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ರಾಷ್ಟ್ರಧ್ವಜದ ಕುರಿತು ಶಾಲೆಯ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿ: ವಿರೇಂದ್ರ ದೊರೆ



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.07**–ತಾಲೂಕಿನ ನೀರಾಮಾನ್ವಿ ಗ್ರಾಮದಲ್ಲಿ ಹಿಂದೂ ಜನಜಾಗೃತಿ ತಾಲೂಕು ಸಮಿತಿ ವತಿಯಿಂದ ಪಿ.ಎಂ.ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಸತೀಶ ಕುಮಾರ ರವರಿಗೆ ಮನವಿ ಸಲ್ಲಿಸಿ ಹಿಂದೂ ಜನಜಾಗೃತಿ ನೀರ ಮಾನ್ವಿಯ ಗ್ರಾಮ ಸಮಿತಿಯ ವಿರೇಂದ್ರ ದೊರೆ ಮಾತನಾಡಿ ರಾಷ್ಟ್ರಧ್ವಜವು ರಾಷ್ಟದ ಆತ್ಮವಾಗಿದ್ದು ದೇಶದಲ್ಲಿ ಆಗಸ್ಟ್ 15 ಮತ್ತು ಜನವರಿ 26 ರಂದು ದೇಶದ ತ್ರಿವರ್ಣ ರಾಷ್ಟ್ರಧ್ವಜವನ್ನು ಅಭಿಮಾನದೊಂದಿಗೆ ಧ್ವಜರೋಹಣ ಮಾಡುವ ಮೂಲಕ ಹಾಗೂ ಪ್ರದರ್ಶಿಸುವ ಮೂಲಕ ರಾಷ್ಟ್ರ ಭಕ್ತಿಯನ್ನು ದೇಶ ಪ್ರೇಮವನ್ನು ರಾಷ್ಟ್ರದ ಪ್ರತಿಯೊಬ್ಬ ದೇಶವಾಸಿ ಕೂಡ ಹೆಮ್ಮೆಯಿಂದ ಪ್ರದರ್ಶಿಸುತ್ತಾನೆ ಅದ್ದರಿಂದ ಶಾಲೆಯ ವಿದ್ಯಾರ್ಥಿಗಳಿಗೆ ಮುಂಬರುವ ಅ.15 ರಂದು ನಿಯಮದಂತೆ ನಮ್ಮ ರಾಷ್ಟ್ರದ ತ್ರಿವರ್ಣ ಧ್ವಜವನ್ನು ಹಾರಿಸುವ ಬಗ್ಗೆ ಹಾಗೂ ಅಧಿಕೃತವಾದ ರಾಷ್ಟ್ರಧ್ವಜಗಳ ಬಗ್ಗೆ ,ಧ್ವಜದ ನಿಯಮಗಳ ಬಗ್ಗೆ ಮಾಹಿತಿ ನೀಡಬೇಕು ಹಾಗೂ ಕಾಗದ ಮತ್ತು ಪ್ಲಾಸ್ಟಿಕ್ ನಿಂದ ಮಾಡಿದ ರಾಷ್ಟ್ರಧ್ವಜಗಳನ್ನು ಬಳಸುವುದು, ತ್ರಿವರ್ಣಗಳ ರೀತಿಯಲ್ಲಿ ತಮ್ಮ ಮುಖವನ್ನು ಬಣ್ಣದಿಂದ ಬಳೆದುಕೊಳ್ಳುವುದು, ರಾಷ್ಟ್ರಧ್ವಜದ ಬಣ್ಣಗಳ ಬಟ್ಟೆಗಳನ್ನು ಧರಿಸಿ ತಿರುಗಾಡುವುದು, ನಿಯಮ ಬಹಿರ ಹಾಗೂ ಧ್ವಜಕ್ಕೆ ಆಗುವ ಅಪಮಾನವಾಗಿದೆ ಎಂದು ತಿಳಿವಳಿಕೆ ಮೂಡಿಸಬೇಕು ಮತ್ತು ಶಾಲೆಯ ವಿದ್ಯಾರ್ಥಿಗಳಿಗೆ ರಾಷ್ಟ್ರಧ್ವಜದ ಕುರಿತು ಅಗತ್ಯ ಮಾಹಿತಿ ಹಾಗೂ ಜಾಗೃತಿ ಮೂಡಿಸಿ ರಾಷ್ಟ್ರ ಧ್ವಜದ ಗೌರವವನ್ನು ಎತ್ತಿ ಹಿಡಿಯಬೇಕು ಎಂದು ಒತ್ತಾಯಿಸಿದರು

ಹಿಂದೂ ಜನಜಾಗೃತಿ ಸಮಿತಿ ನೀರಮಾನ್ವಿಯ ಸದಸ್ಯರಾದ ಜೆಲ್ಲಿ ಶ್ರೀನಿವಾಸ , ಜೆಲ್ಲಿ ಆಂಜನೇಯ್ಯ , ಜೆಲ್ಲಿ ಬುಡ್ಡಪ್ಪ , ಪ್ರವೀಣ್ ಉಪ್ಪಾರ, ಉರುಕುಂದಪ್ಪ ಶಿಲ್ಯಾಕ್ಯಾತ , ರಂಗನಾಥ ಗೌಡ ,ಅಭಿಮನ್ಯು, ನಾಗರಾಜ ಮಡಿವಾಳ, ಮಟಮಾರಿ ರಾಮ, ಸೇರಿದಂತೆ ಇನ್ನಿತರರು ಇದ್ದರು.

## ಮರುಜೀವ ಪಡೆದ ಶುದ್ಧ ಕುಡಿಯುವ ನೀರಿನ ಘಟಕ: ಸಂಸ್ಥೆಯ ಸೇವೆಗೆ ಶ್ಲಾಘನೆ

ಯುವ ಮಾರ್ಗ ಸುದ್ದಿ




**ರಾಯಚೂರು,ಆ.07**– ಗ್ರಾಮದ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸುವ ಸಲುವಾಗಿ, ಜಾಗೀರ್ ವೆಂಟಾಪುರ ಗ್ರಾಮದಲ್ಲಿ ಕಾರ್ಯನಿರ್ವಹಿಸದೆ ಸ್ಥಗಿತಗೊಂಡಿದ್ದ ಶುದ್ಧ ಕುಡಿಯುವ ನೀರಿನ ಘಟಕವನ್ನು ಪುನಃ ಕಾರ್ಯರೂಪಕ್ಕೆ ತರಲಾಗಿದ್ದು, ಗುರುವಾರದಂದು ಉದ್ಘಾಟನೆ ಮಾಡಲಾಯಿತು. ಈ ಕಾರ್ಯಕ್ಕೆ ಸ್ವಾಮಿ ವಿವೇಕಾನಂದ ಯೂತ್ ಮೂವ್ಮೆಂಟ್ ಸಂಸ್ಥೆಯು ಕೈ ಜೋಡಿಸಿದ್ದು, ಗ್ರಾಮಸ್ಥರಿಂದ ಮೆಚ್ಚುಗೆ ವ್ಯಕ್ತವಾಗಿದೆ.

ಈ ಉದ್ಘಾಟನಾ ಸಮಾರಂಭಕ್ಕೆ ರಾಯಚೂರು ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಪವಾರ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಬೂದೆಮ್ಮ, ಉಪಾಧ್ಯಕ್ಷರಾದ ಮಂಗಳ ಭಗವಾನ್ ಮತ್ತು ಸ್ವಾಮಿ ವಿವೇಕಾನಂದ ಯೂತ್ ಮೂವ್ಮೆಂಟ್ ಸಂಸ್ಥೆಯ ಮುಖ್ಯಸ್ಥರಾದ ಡಾ. ಡೆನಿಸ್ ಚೌಹಾಣ್ ಭಾಗವಹಿಸಿದ್ದರು.ಕಾರ್ಯಕ್ರಮದಲ್ಲಿ ಮಾತನಾಡಿದ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ ಅವರು, "ಸಂಸ್ಥೆಯ ಈ ಕಾರ್ಯ ನಿಜಕ್ಕೂ ಶ್ಲಾಘನೀಯ. ಕಳೆದ ಹತ್ತು ವರ್ಷಗಳಿಂದ ನೀರು ಮತ್ತು ನೈರ್ಮಲ್ಯದ ಕುರಿತು ಜನರಿಗೆ ಜಾಗೃತಿ ಮೂಡಿ ಸುವ ಕೆಲಸವನ್ನು ಸಂಸ್ಥೆ ಮಾಡುತ್ತಿದೆ. ಇಂತಹ ಜನಪರ ಕಾರ್ಯಗಳನ್ನು ರಾಯಚೂರು ಜಿಲ್ಲೆ ಯಲ್ಲಿ ಅನೇಕ ಬಾರಿ ಮಾಡಿದೆ. ಇದರ ಸದುಪಯೋಗವನ್ನು ಪಡೆದು ಶುದ್ಧ ನೀರನ್ನು ಕುಡಿದು ಆರೋಗ್ಯಕರ ಜೀವನವನ್ನು ನಡೆಸಬೇಕೆಂದು" ಗ್ರಾಮಸ್ಥರಿಗೆ ಸಲಹೆ ನೀಡಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್ಮೆಂಟ್ ಸಂಸ್ಥೆಯ ಆರ್ಥಿಕ ಸಬಲೀಕರಣ ವಿಭಾಗದ ಮುಖ್ಯಸ್ಥರಾದ ಡಾ. ಡೆನಿಸ್ ಚೌಹಾಣ್ ಮಾತನಾಡಿ, "ಸರ್ಕಾರದ ಒಂದು ಆಸ್ತಿಯಾಗಿದ್ದ ಈ ನೀರಿನ ಘಟಕ ದುರಸ್ತಿಯಿಲ್ಲದೆ ನಿರುಪಯುಕ್ತವಾಗಿತ್ತು. ಇದನ್ನು ಗಮನಿಸಿದ ನಾವುಗಳು ಗ್ರಾಮಸ್ಥರಿಗೆ ಶುದ್ಧ ನೀರು ಸಿಗಬೇಕೆಂಬ ಉದ್ದೇಶದಿಂದ ಲಿಂಡ್ ಸ್ಟಮ್ ಸರ್ವಿಸಸ್ ಪ್ರೈವೇಟ್ ಲಿಮಿಟೆಡ್ ಸಹಯೋಗದೊಂದಿಗೆ ಘಟಕವನ್ನು ದುರಸ್ತಿ ಮಾಡಿದ್ದೇವೆ. ಇದರ ನಿರ್ವಹಣೆಯ ಜವಾಬ್ದಾರಿಯನ್ನು ಶ್ರೀನಿಧಿ ಸ್ವಸಹಾಯ ಸಂಘಕ್ಕೆ ವಹಿಸಲಾಗಿದೆ. ಇದರಿಂದ ಸಂಘದ ಸದಸ್ಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಸಹಾಯವಾಗುತ್ತದೆ. ಸಮುದಾಯದ ಸಹಕಾರದಿಂದ ಇಂತಹ ಅನೇಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿದ್ದೇವೆ. ಇದರಿಂದ ಗ್ರಾಮಸ್ಥರು ನೀರಿನಿಂದ ಬರುವ ರೋಗಗಳಿಂದ ದೂರವಿರಬಹುದು" ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀನಿಧಿ ಸ್ವಸಹಾಯ ಸಂಘದ ಮಹಿಳೆಯರು, ಶಾಲಾ ಮಕ್ಕಳು, ಗ್ರಾಮಸ್ಥರು ಮತ್ತು ಸಂಸ್ಥೆಯ ಸಿಬ್ಬಂದಿ ಉಪಸ್ಥಿತರಿದ್ದರು.

## ಆ.10 ನಗರದಲ್ಲಿ ರಾಜಶೇಖರ ನೀರಮಾನ್ವಿ ನೆನಪುಕತೆಗಳ ಸಂವಾದ ಮಾತುಕತೆ

**ಬಳ್ಳಾರಿ, ಆ.07**– ಕಳೆದ ವರ್ಷ ನಿಧನರಾದ ಕಥೆಗಾರ ಡಾ.ರಾಜಶೇಖರ ನೀರಮಾನ್ವಿ ಅವರ ಕಥೆಗಳ ಕುರಿತು ಮಾತುಕತೆ ಮತ್ತು ಸಂವಾದ ಕಾರ್ಯಕ್ರಮವನ್ನು ಆ.10 ರಂದು ಬೆಳಿಗ್ಗೆ 10.30 ಕ್ಕೆ ನಗರದ ಬಸವರಾಜೇಶ್ವರಿ ಪಬ್ಲಿಕ್ ಸ್ಕೂಲ್ ಅಂಡ್ ಕಾಲೇಜ್ ನ ಬಸವ ಸಭಾಂಗಣದಲ್ಲಿ ಬೆಂಗಳೂರಿನ ಬೆಸಗರಹಳ್ಳಿ ರಾಮಣ್ಣ ಪ್ರತಿಷ್ಠಾನ ಮತ್ತು ನಗರದ ಲೋಹಿಯಾ ಪ್ರಕಾಶನ ಹಮ್ಮಿಕೊಂಡಿದೆ.

ಈ ಕುರಿತು ಇಂದು ಲೋಹಿಯಾ ಪ್ರಕಾಶನದ ಸಿ.ಚೆನ್ನಬಸಣ್ಣ ಅವರು ಸುದ್ದಿಗೋಷ್ಠಿ ನಡೆಸಿ ಈ ಮಾಹಿತಿ ನೀಡಿದರು. ಕಾರ್ಯಕ್ರಮವನ್ನು ಲೇಖಕಿ ಸವಿತಾ ನಾಗಭೂಷಣ ಅವರು ಉದ್ಘಾಟನೆ ಮಾಡಲಿದ್ದು ತಾವು ಸೇರಿದಂತೆ. ಸರ್ವಮಂಗಳ ನೀರಮಾನ್ವಿ, ಬೆಸಗರಳ್ಳಿ ರಾಮಣ್ಣ ಪ್ರತಿಷ್ಠಾನದ ಅಧ್ಯಕ್ಷೆ ಎಚ್.ಆರ್.ಸುಜಾತಾ ಅಧ್ಯಕ್ಷತೆವಹಿಸಲಿದ್ದಾರೆ.

ಉದ್ಘಾಟನಾ ಸಮಾರಂಭದ ನಂತರ ಲೇಖಕರಾದ ಡಾ.ರಾಜೇಂದ್ರ ಚೆನ್ನಿ, ಡಾ.ಪಿ.ಭಾರತಿ ದೇವಿ. ಆ ಬಳಿಕ ಡಾ.ಅಮರೇಶ ನುಗಡೋಣಿ ಮತ್ತು ಡಾ.ಚಿದಾನಂದ ಸಾಲಿ ಮಾತನಾಡಲಿದ್ದಾರೆ.

ಸಂಜೆ.4.30 ಕ್ಕೆ ಸಮಾರೋಪ ಸಮಾರಂಭದಲ್ಲಿ ಚಂದ್ರಕಾಂತ ವಡ್ಡು ಅವರು ಮಾತನಾಡಲಿದ್ದಾರೆ.

ಡಾ. ರಾಜಶೇಖರ ನೀರಮಾನ್ವಿ ಪರಿಚಯ

ಡಾ. ರಾಜಶೇಖರ ನೀರಮಾನ್ವಿ ಕನ್ನಡದ ಅತ್ಯುತ್ತಮ ಕಥೆಗಾರರಲ್ಲಿ ಒಬ್ಬರು. ಅವರು ಬರೆದ ಕಥೆಗಳು ಕೆಲವೇ ಆದರೂ ಅವೆಲ್ಲ ಸಶಕ್ತ ಮತ್ತು ಸಫಲ ಕಥೆಗಳಾಗಿವೆ. ಅವರ ಆರಂಭಿಕ ಶಿಕ್ಷಣ ಉರ್ದು ಭಾಷೆಯ ಅಲಿಫ್ ಬೇಪೇ ಮೂಲಕ ಪ್ರಾರಂಭವಾಗಿ ನಂತರ ಕನ್ನಡಕ್ಕೆ ತಿರುಗಿತು. 1967ರಲ್ಲಿ ಕರ್ನಾಟಕ ವಿಶ್ವವಿದ್ಯಾನಿಲಯದಿಂದ ಎಂ.ಎಸ್ಸಿ. ಅನ್ವಯಿಕ ಭೂ ವಿಜ್ಞಾನ ಪದವಿ ನಂತರ ಪಿಎಚ್.ಡಿ. ಪದವಿ ಪಡೆದರು. ಮಾನ್ವಿಯ ಸರ್ಕಾರಿ ಪದವಿಪೂರ್ವ ಕಾಲೇಜು, ಬಳ್ಳಾರಿಯ ವೀರಶೈವ ಮಹಾವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ 2000 ಇಸವಿಯಲ್ಲಿ ನಿವೃತ್ತಿ ಹೊಂದಿದರು.

1968 ರಿಂದ 1970ರವರೆಗೆ ಹಿರಿಯರಾದ ಶಾಂತರಸ, ಚಂದ್ರಕಾಂತ ಕುಸನೂರ, ಜಯತೀರ್ಥ ರಾಜಪುರೋಹಿತ ಮತ್ತು ಪ್ರೊ. ವೈ.ಕೆ. ಚಂದ್ರಶೇಖರಪ್ಪ ಅವರೊಂದಿಗೆ ಸೇರಿ 'ಪ್ರತೀಕ' ಸಾಹಿತ್ಯ ತ್ರೈಮಾಸಿಕ ಪತ್ರಿಕೆ ಸಂಪಾದಿಸಿ, ಪ್ರಕಟಿಸಿದರು. ಅದೇ ಹೆಸರನ್ನು 1988ರಲ್ಲಿ ಬಳ್ಳಾರಿಯಲ್ಲಿ ತಾವು ಕಟ್ಟಿದ ಮನೆಗೆ ಕೂಡ ಇಟ್ಟರು.

ಹಂಗಿನರಮನೆಯ ಹೊರಗೆ (1978) ಕರ್ಪೂರದ ಕಾಯದಲ್ಲಿ (1990) ಕಥಾ ಸಂಕಲನಗಳು, ಭೂತ (1988) ನಾಟಕ ಪ್ರಕಟವಾಗಿವೆ. 'ಹಂಗಿನರಮನೆಯ ಹೊರಗೆ' ಕೃತಿಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಪುಸ್ತಕ ಬಹುಮಾನ, 'ಕರ್ಪೂರದ ಕಾಯದಲ್ಲಿ' ಕೃತಿಗೆ ಸಿರಿವಾರದ ಉಮಾಪತಿ ಚುಕ್ಕಿ ಪ್ರತಿಷ್ಠಾನದ ಪ್ರಶಸ್ತಿ ದೊರಕಿವೆ.

ಪ್ರಚಾರ, ಪ್ರಶಸ್ತಿ ಮತ್ತು ಪ್ರಸಿದ್ಧಿಗಳಿಂದ ಗಾವುದ ದೂರವಿದ್ದ ನೀರಮಾನ್ವಿ ಅವರಿಗೆ ಡಾ. ಬೆಟಗೇರಿ ಕೃಷ್ಣಶರ್ಮ ಕಥಾಪ್ರಶಸ್ತಿ, ರಾಯಚೂರು ಜಿಲ್ಲಾ 9ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ಹುಡುಕಿಕೊಂಡು ಬಂದವು.

ಸುದ್ದಿಗೋಷ್ಠಿಯಲ್ಲಿ ಕತೆಗಾರರಾದ ಅಜಯ್ ಬಣಕಾರ್, ದಸ್ತಗೀರ್ಸಾಬ್ ದಿನ್ನಿ, ವೀರೇಂದ್ರ ರಾವಿಹಾಳ್, ಪ್ರಭುದೇವ ಕಪ್ಪಗಲ್ಲು ಇದ್ದರು.

## ಕಮ್ಯುನಿಟಿ ಮೊಬಿಲೈಜರ್ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು,ಆ.7**– ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯ ವಿವಿಧ ವಾರ್ಡ್ಗಳಲ್ಲಿ 2 ವರ್ಷಗಳ ಅವಧಿಗೆ ಸ್ವಚ್ಛ ಭಾರತ್ ಮಿಷನ್ 2.0ನ ಐಇಸಿ ಚಟುವಟಿಕೆ ಕೈಗೊಳ್ಳಲು ಡೇ-ನಲ್ಮ್ ಯೋಜನೆಯಡಿ ನೋಂದಾಯಿತ ಎಸ್‌ಹೆಚ್‌ಜಿ ಸದಸ್ಯರಿಂದ ಕಮ್ಯುನಿಟಿ ಮೊಬಿಲೈಜರ್ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಎಸ್‌ಹೆಚ್‌ಜಿ ಸದಸ್ಯರು ಸ್ವ–ಸಹಾಯ ಗುಂಪಿನ ಸದಸ್ಯರು ಆಗಿರಬೇಕು. (ಗುಂಪಿನ ಪಾಸ್ ಬುಕ್), ಆಧಾರ್ ಕಾರ್ಡ್, ಗುರುತಿನ ಚೀಟಿ, ರೇಷನ್ ಕಾರ್ಡ್ ಹೊಂದಿರಬೇಕು, ಹತ್ತನೇ ತರಗತಿಯಲ್ಲಿ ಪಾಸ್ ಆಗಿರಬೇಕು, ಡೇ–ನಲ್ಮ್ ಎಂ.ಐ.ಎಸ್ ಎಸ್‌ಹೆಚ್‌ಜಿ ನೋಂದಾಣಿಯಾಗಿರಬೇಕು, ಎಂಪನೇಲ್ ದಾಖಲೆಗಳೊಂದಿಗೆ ಆಗಸ್ಟ್ 14ರ ಸಂಜೆ 5.30ಗಂಟೆಯೊಳಗೆ ಪಾಲಿಕೆಯ ಜೋನಲ್–1 ನೇ ಮಹಡಿ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ಗುಂಪುಗಳ ಅರ್ಹತೆ ಮೇರೆಗೆ ಆಯ್ಕೆಗೊಂಡಿರುವ ಗುಂಪುಗಳಿಗೆ ಜಿಲ್ಲಾ ಮಟ್ಟದಲ್ಲಿ ಸಂದರ್ಶನ ಮುಖಾಂತರ ಸ್ವ–ಸಹಾಯ ಸಂಘಗಳ ಪಟ್ಟಿಯನ್ನು ಅಂತಿಮಗೊಳಿಸಲಾಗುವುದು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಟಿ ಔಷಧಿ ಸೇವನೆ: ನಾಲ್ವರ ಸಾವು

**ಸೇಡಂ,ಆ.07**– ತಾಲೂಕಿನ ಇಮಡಾಪುರದಲ್ಲಿ ಮದ್ಯಸೇವನೆ ಚಟ ಬಿಡಿಸಲು ನಾಟಿ ವೈದ್ಯರು ನೀಡಿದ್ದ ಔಷಧ ಸೇವಿಸಿದ್ದ ನಾಲ್ವರು ಮೃತಪಟಿದ್ದಾರೆ. ಒಬ್ಬರು ಕಲಬುರ್ಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ.

ಬುರುಗಪಲ್ಲಿ ಗ್ರಾಮದ ಲಕ್ಷ್ಮೀ ನರಸಿಂಹಲು (45), ಶಹಬಾದ ಪಟ್ಟಣದ ಗಣೇಶ ಬಾಬು ರಾಠೋಡ (24), ಮದಕಲ್ ಗ್ರಾಮದ ನಾಗೇಶ (25) ಹಾಗೂ ಚಿತ್ತಾಪುರ ತಾಲೂಕಿನ ಭೀಮನಹಳ್ಳಿ ತಾಂಡದ ನಿವಾಸಿ ಸೇರಿ ಒಟ್ಟು ನಾಲ್ಕು ಜನರು ಸಾವನ್ನಪ್ಪಿದ್ದಾರೆ.

ತಾಲೂಕಿನ ಇಮಡಾಪೂರ ಗ್ರಾಮದ ಫಕೀರಪ್ಪ ಅಲಿಯಾಸ್ ಸಾಯಪ್ಪಾ ಮುತ್ಯಾ ಎಂಬುವವರು ನೀಡಿರುವ ನಾಟಿ ಔಷಧಿ ಸೇವಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ

ಬುಧವಾರ ಸಂಜೆ ಪೊಲೀಸರು ಆರೋಪಿಯನ್ನು ಬಂಧಿಸಿ ಠಾಣೆಗೆ ಕರೆದುಕೊಂಡು ಬಂದಿರುವುದಾಗಿ ಪೊಲೀಸ್ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಕುರುಗೋಡು ತಾಲ್ಲೂಕಿನಲ್ಲಿ ಪೌತಿ ಖಾತೆ ಅಭಿಯಾನ



**ಬಳ್ಳಾರಿ,ಆ.07**– ಕಂದಾಯ ಸಚಿವ ಕೃಷ್ಣಭೈರೆಗೌಡ ಅವರ ಆಶಯದಂತೆ ರಾಜ್ಯದಲ್ಲಿ ಹಲವು ದಶಕಗಳಿಂದ ಹಾಗೇ ಉಳಿದಿರುವ ಪೌತಿ ಖಾತೆಗಳನ್ನು ಸಂಬಂಧಿಸಿದವರಿಗೆ ಖಾತೆ ಬದಲಾವಣೆ ಮಾಡುವ ಪ್ರಕ್ರಿಯೆಯ ವಿಶೇಷ ಅಭಿಯಾನ ಜಿಲ್ಲೆಯ ಕುರುಗೋಡು ತಾಲೂಕಿನಲ್ಲಿ ನಡೆದಿದ್ದು ಈವರೆಗೆ ಒಂದು ಸಾವಿರಕ್ಕೂ ಹೆಚ್ಚು ಖಾತೆಗಳನ್ನು ಬದಲಿಸಲಾಗಿದೆ.

ಕುರುಗೋಡು ತಾಲೂಕಿನಲ್ಲಿ 6097 ಜಿಮೀನುಗಳು ಮೃತರ ಹೆಸರಿನ ಖಾತೆಯಲ್ಲಿಯೇ ಮುಂದುವರೆದಿವೆ.

ಇದರಲ್ಲಿ ಯಾವು ಕಾನೂನು ರೀತಿಯಲ್ಲಿ ಈಗಿನ ವಾರಸುದಾರರ ಹೆಸರಿಗೆ ಬದಲು ಮಾಡಲು ಸಾಧ್ಯವಿದೆ ಆ ಎಲ್ಲವನ್ನೂ ಪೌತಿ ಖಾತೆ ಅಭಿಯಾನದ ಮೂಲಕ ಮಾಡುವ ಪ್ರಕ್ರಿಯೆ ಇಂದು ಓರ್ವಾಯಿ ಗ್ರಾಮದಲ್ಲಿ ನಡೆಯಿತು.

ಮೃತರ ಹೆಸರಿನ ಪಹಣಿಗಳಿಗೆ ಮುಂದಿನ ದಿನಗಳಲ್ಲಿ ಸರಕಾರದ ಸವಲತ್ತುಗಳು ದೊರೆಯುವುದಿಲ್ಲ. ಇದರಿಂದ ಮೃತರ ಹೆಸರಿನಲ್ಲಿರುವ ಜಮೀನಿಗಳ ವಾರಸುದಾರರಿಗೆ ತೊಂದರೆ ಆಗುತ್ತೆ. ಹೀಗಾಗಿ ಸಂಬಂಧಿಸಿದ ಜನರಿಂದ ಅರ್ಜಿ ಕರೆಯದೆ. ಕಂದಾಯ ಅಧಿಕಾರಿಗಳಾದ ತಹಶಿಲ್ದರ್ ನರಸಪ್ಪ, ಉಪ ತಹಶೀಲ್ದರ್ ಎಸ್. ರಾಜಶೇಖರ್, ಕಂದಾಯ ನಿರೀಕ್ಷಕರಾದ ಸುರೇಶ್ ಎಸ್ , ಎಸ್.ಎಂ.ಭದ್ರಯ್ಯ ಮೂಲ ದಲಾದವರು ಸ್ವತಃ ರೈತರ ಮನೆ ಬಾಗಿಲಿಗೆ ತೆರಳಿ ಪೌತಿ ಖಾತೆ ಮಾಡಿಕೊಡುವ ಕಾರ್ಯ ಆರಂಭಿಸಿದ್ದಾರೆ.

ಈಗಾಗಲೇ 6097 ಪಹಣಿ ಯಲ್ಲಿ 1021 ಪಹಣಿ ಗಳಿಗೆ ಖಾತೆ ಬದಲಾದವಣೆ ಮಾಡಿದ್ದಾರೆ. ಕಂದಾಯ ಅಧಿಕಾರಿಗಳು, ಗ್ರಾಮ ಸಹಾಯಕರು ರೈತರಿಗೆ ಮನವರಿಕೆ ಮಾಡಿಕೊಟ್ಟು ಈ ಅಭಿಯಾನದಡಿ ಪ್ರಗತಿ ಸಾಧಿಸುತ್ತಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H